ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily

ಪ್ರತಿ ಸುದ್ದಿಯ ಧ್ವನಿ

Volume: 04 ಸಂಪುಟ: 04 | Issue:307 ಸಂಚಿಕೆ: 307 | Date: 24-12-2025 Wednesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

## ಇಬ್ಬರು ಮಕ್ಕಳೊಂದಿಗೆ ತಾಯಿ ಕಾಣೆ





ತುಮಕೂರು: ಕುಣಿಗಲ್ ಪೊಲೀಸ್ ಠಾಣೆ ವ್ಯಾಪ್ತಿ ಅಜ್ಜೆಗೌಡನಪಾಳ್ಯ ಗ್ರಾಮದ ಸುಮಾರು 26 ವರ್ಷದ ವರ್ಷಿಣಿ ಎಸ್.ಜಿ. ಎಂಬ ಮಹಿಳೆಯು 6 ವರ್ಷದ ನಿಖಿಲ್ ಗೌಡ ಹಾಗೂ 4 ವರ್ಷದ ದೀಕ್ಷಿತ್ ಗೌಡ ಎಂಬ ತನ್ನ ಇಬ್ಬರು ಮಕ್ಕಳೊಂದಿಗೆ ಡಿಸೆಂಬರ್ 18ರಂದು ಕಾಣೆಯಾಗಿದ್ದಾಳೆ ಎಂದು ಠಾಣೆಯಲ್ಲಿ ದೂರು ದಾಖಲಾಗಿದೆ.

ಕಾಣೆಯಾದ ಮಹಿಳೆಯು 5.3 ಅಡಿ ಎತ್ತರ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಮಾತನಾಡುತ್ತಾಳೆ. ಕಾಣೆಯಾದ ನಿಖಿಲ್ ಗೌಡನು 3.5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದಾನೆ. ದೀಕ್ಷಿತ್ ಗೌಡನು 2.5 ಅಡಿ ಎತ್ತರ, ಗೋಧಿ ಬಣ್ಣ ಹೊಂದಿದ್ದಾನೆ.

ಕಾಣೆಯಾದವರ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ವಾ.ಸಂ. 08132–220229, 0816–2272451ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

## ಜಿಲ್ಲೆಯಾದ್ಯಂತ ದಟ್ಟ ಮಂಜು, ಮೈನಡುಗಿಸುವ ಥಂಡಿ, ಚಳಿ




ತುಮಕೂರು: ಧನುರ್ಮಾಸ ಆರಂಭವಾಯಿತ್ತೆಂದರೆ ಮೈನಡುಗಿಸುವ ಚಳಿ ಎಂಬುದು ಎಲ್ಲರಿಗೂ ಗೊತ್ತಿರುವ ವಿಚಾರ. ಇಂದು ಬೆಳಿಗ್ಗೆಯೇ ಕಲ್ಪತರುನಾಡಲ್ಲಿ ತುಮಕೂರು ನಗರ ಸೇರಿದಂತೆ ಜಿಲ್ಲೆಯಾದ್ಯಂತ ದಟ್ಟ ಮಂಜು ಆವರಿಸಿದ್ದು, ವಾಹನ ಸವಾರರು ಸುಗಮವಾಗಿ ಸಂಚರಿಸಲು ಪರದಾಡುವಂತಾಯಿತು.

ಈಗಾಗಲೇ ಮೈನಡುಗಿಸುವ ಥಂಡಿ, ಚಳಿ ದುಪ್ಪಟವಾಗಿದ್ದು, ಸೂರ್ಯನ ರಶ್ಮಿ ಭೂಮಿಗೆ ತಾಗದಷ್ಟರ ಮಟ್ಟಿಗೆ ಇಂದು ಬೆಳಿಗ್ಗೆ 6 ಗಂಟೆಯಿಂದಲೇ ದಟ್ಟ ಮಂಜು ಆವರಿಸಿತ್ತು. ನಗರ ಪ್ರದೇಶ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಅಕ್ಕಪಕ್ಕದ ಮನೆಗಳು ಹಾಗೂ ಎದುರಿಗೆ ಬಂದವರು ಕಾಣದಷ್ಟರ ಮಟ್ಟಿಗೆ ಮಂಜು ದಟ್ಟವಾಗಿ ಆವೃತವಾಗಿತ್ತು.

ಇನ್ನು ರಾಷ್ಟ್ರೀಯ ಹೆದ್ದಾರಿ, ಬೈಪಾಸ್ ರಸ್ತೆ ಸೇರಿದಂತೆ ಜಿಲ್ಲೆಯ ವಿವಿಧೆಡೆ ರಸ್ತೆಗಳಲ್ಲಿ ದಟ್ಟ ಮಂಜು ಆವರಿಸಿದ್ದರಿಂದ ಬೆಳಿಗ್ಗೆ 8.30 ಗಂಟೆಯಾದರೂ ರಸ್ತೆಯಲ್ಲಿ ಎದುರಿಗೆ ಬರುವ ವಾಹನಗಳು ಚಾಲಕರಿಗೆ ಕಾಣದಂತಾಗಿತ್ತು. ಇದರಿಂದಾಗಿ ವಾಹನಗಳ ಸುಗಮವಾಗಿ ಚಲಿಸಲಾಗದೆ ಚಾಲಕರು ಪರದಾಡುವಂತಾಗಿತ್ತು. ಬಸ್, ಲಾರಿ, ಕಾರುಗಳು ಹೆಡ್‌ಲೈಟ್ ಹಾಕಿಕೊಂಡು ಚಲಿಸಿದರೂ ಸಹ ರಸ್ತೆಯಲ್ಲಿ ಬೆಳಕು ಕಾಣದಂತಾಗಿತ್ತು.

ಕೆಎಸ್ಸಾರ್ಟಿಸಿ ಬಸ್, ಖಾಸಗಿ ಬಸ್ ಚಾಲಕರನ್ನು ಹೊರತುಪಡಿಸಿದರೆ ಸರಕು ಸಾಗಣೆ, ಲಾರಿ ಚಾಲಕರುಗಳು ಮೈನಡುಗಿಸುವ ಚಳಿ, ದಟ್ಟ ಮಂಜಿನಿಂದಾಗಿ ತಮ್ಮ ವಾಹನಗಳನ್ನು ರಸ್ತೆ ಬದಿ ನಿಲ್ಲಿಸಿ ಟೀ ಅಂಗಡಿಗಳ ಬಳಿ ಬೆಂಕಿ ಹಾಕಿಕೊಂಡು ಚಳಿಯಿಂದ ಪಾರಾಗಲು ಮೈ ಬಿಸಿ ಮಾಡಿಕೊಳ್ಳುತ್ತಿದ್ದ ದೃಶ್ಯಗಳು ಕಂಡು ಬಂತು.

ಬೆಳಿಗ್ಗೆ 8.45 ಗಂಟೆಯಾದರೂ ದಟ್ಟ ಮಂಜು ಇದ್ದುದರಿಂದ ಎಂದಿನಂತೆ ಶಾಲಾ–ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ಅನಿವಾರ್ಯವಾಗಿ ಮಾಮೂಲಿನಂತೆ ಎದ್ದು ರೆಡಿಯಾಗಿ 7 ಗಂಟೆಯಿಂದಲೇ ಕೊರೆವ ಥಂಡಿ, ದಟ್ಟ ಮಂಜು ಹಾಗೂ ಮೈನಡುಗಿಸುವ ಚಳಿ ನಡುವೆಯೂ ಸ್ವೆಟರ್, ಜರ್ಕಿನ್ ಧರಿಸಿ ಶಾಲಾ–ಕಾಲೇಜುಗಳತ್ತ ಹೆಜ್ಜೆ ಹಾಕುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ಬೆಳಿಗ್ಗೆ 9 ರ ನಂತರ ಸೂರ್ಯನ ಕಿರಣಗಳು ಪ್ರಜ್ವಲಿಸಿದಂತೆ ದಟ್ಟವಾಗಿ ಆವರಿಸಿದ್ದ ಮಂಜು ನಿಧಾನವಾಗಿ ಕಡಿಮೆಯಾಯಿತು.

## ನರೇಗಾ ಹೆಸರು ಬದಲವಣೆ ವಿರುದ್ಧ ಪ್ರತಿಭಟನೆ

### ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದು ಮಹಾತ್ಮಗಾಂಧೀಜಿ




ತುಮಕೂರು:ಗ್ರಾಮೀಣ ಬಡಜನತೆಯ ದುಡಿಯುವ ಹಕ್ಕನ್ನು ಕಸಿಯುವ ವಿಬಿ ಜಿ ರಾಮ್ ಜಿ ಮಸೂದೆ–2025ಕ್ಕೆ ರಾಷ್ಟ್ರಪತಿಗಳು ಅಂಕಿತ ಹಾಕಿರುವುದನ್ನು ವಿರೋಧಿಸಿ ಹಾಗೂ ಈ ಮಸೂದೆಯನ್ನು ಕೂಡಲೇ ವಾಪಸ್ ಪಡೆಯುವಂತೆ ಆಗ್ರಹಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಸಿಪಿಐ) ಜಿಲ್ಲಾ ಘಟಕದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಅಶೋಕ ರಸ್ತೆಯಲ್ಲಿರುವ ಬಿ.ಎಸ್.ಎನ್.ಎಲ್. ಕಚೇರಿ ಮುಂದೆ ಜಮಾಯಿಸಿದ ಭಾರತ ಕಮ್ಯುನಿಸ್ಟ್ ಪಕ್ಷದ ಕಾರ್ಯಕರ್ತರು ಮನರೇಗಾ ಹೆಸರನ್ನು ಸಂಪೂರ್ಣವಾಗಿ ಬದಲಿಸಿ ಕೇಂದ್ರ ಸರ್ಕಾರ ಜಾರಿಗೊಳಿಸಲು ಹೊರಟಿರುವ ವಿಬಿ ಜಿ ರಾಮ್ ಜಿ ಮಸೂದೆಯನ್ನು ಕೂಡಲೇ ವಾಪಸ್ ಪಡೆದು ದೇಶದ ಸುಮಾರು 12 ಕೋಟಿ ನರೇಗಾ ಕಾರ್ಮಿಕರ ಉದ್ಯೋಗವನ್ನು ಕಾಪಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಿಪಿಐ ಜಿಲ್ಲಾ ಕಾರ್ಯದರ್ಶಿ ಗಿರೀಶ್ ಮಾತನಾಡಿ, ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ದೇಶದ ಬಡತನ ನಿರ್ಮೂಲನೆ ಮಾಡಲು ಅಂದಿನ ಎಡಪಕ್ಷಗಳು ಹಾಗೂ ಕಾಂಗ್ರೆಸ್ ನೇತೃತ್ವದ ಕೇಂದ್ರ ಸರ್ಕಾರ ಗ್ರಾಮೀಣ ಜನರಿಗೆ ಉದ್ಯೋಗ ನೀಡುವ ಯೋಜನೆಯನ್ನು ಪ್ರಾರಂಭ ಮಾಡಿತ್ತು. ಇದರಿಂದ ಭಾರತದಲ್ಲಿ ಬಡತನ ನಿರ್ಮೂಲನೆ ಮಾಡಲು ಅಲ್ಪಸ್ವಲ್ಪ ಪ್ರಮಾಣದಲ್ಲಿ ಸಾಧ್ಯವಾಗಿದೆ ಎಂದರು.

ಬ್ರಿಟೀಷರ ವಿರುದ್ಧ ಹೋರಾಟ ಮಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದು ಮಹಾತ್ಮಗಾಂಧೀಜಿ ಮತ್ತು ಕಾಂಗ್ರೆಸ್ ಪಕ್ಷ. ದೇಶಕ್ಕಾಗಿ ತ್ಯಾಗ ಬಲಿದಾನ ಮಾಡಿದ ಮಹಾತ್ಮ ಗಾಂಧೀಜಿಯವರ ಹೆಸರನ್ನು ಉದ್ಯೋಗ ಖಾತ್ರಿ ಯೋಜನೆಯಿಂದ ತೆಗೆದಿರುವುದು ದೇಶದ ಬಡವರಿಗೆ ಮಾಡಿದ ದ್ರೋಹವಾಗಿದೆ. ಈ ಮಸೂದೆಗೆ ರಾಷ್ಟ್ರಪತಿಗಳು ಅಂಕಿತ ಹಾಕಿರುವುದು ಸರಿಯಲ್ಲ ಎಂದರು.

ಲೋಕಸಭೆಯಲ್ಲಿ ವಿರೋಧ ಪಕ್ಷಗಳು ಮನರೇಗಾ ಹೆಸರು ಬದಲಿಸಲು ತೀವ್ರ ವಿರೋಧ ವ್ಯಕ್ತಪಡಿಸಿ ಸಭಾತ್ಯಾಗ ಮಾಡಿದರೂ ಕೇಂದ್ರ ಸರ್ಕಾರ ವಿಬಿ ಜಿ ರಾಮ್ ಜಿ ಮಸೂದೆಗೆ ರಾಷ್ಟ್ರಪತಿಗಳಿಂದ ಅಂಕಿತ ಹಾಕಿಸಿ ದೇಶದ 140 ಕೋಟಿ ಜನರಿಗೆ ದ್ರೋಹ ಮಾಡಿದೆ. ಈ ಮೂಲಕ ಸುಮಾರು 12 ಕೋಟಿ ಕಾರ್ಮಿಕರ ಬದುಕನ್ನು ಬೀದಿಗೆ ತಳ್ಳುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಉದ್ಯೋಗ ಖಾತ್ರಿ ಯೋಜನೆಯಲ್ಲಿ ಮಹಾತ್ಮಗಾಂಧೀಜಿಯವರ ಹೆಸರನ್ನು ತೆಗೆದಿರುವ ಪ್ರಧಾನಿ ನರೇಂದ್ರ ಮೋದಿಯವರು ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು.

ಸಿಪಿಐ ಪಕ್ಷದ ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯರಾದ ಕಂಬೇಗೌಡ ಮಾತನಾಡಿ, ಈ ಹಿಂದಿನ ಕೇಂದ್ರ ಸರ್ಕಾರ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಮಹಾತ್ಮಗಾಂಧಿಯವರಿಗೆ ಗೌರವ ಸೂಚಿಸುವಂತಹ ಹೆಸರನ್ನು ಸೂಚಿಸಿತ್ತು. ಆದರೆ ಪ್ರಸ್ತುತ ಎನ್‌ಡಿಎ ನೇತೃತ್ವದ ಕೇಂದ್ರ ಸರ್ಕಾರ (ಪುಟ–4)

## ನಾಡಿನ ಸಾಂಸ್ಕೃತಿಕ ಪರಂಪರೆಯ ಪ್ರತೀಕ ದಸರಾ: ಸ್ಫಟಿಕಪುರಿ ಮಹಾ ಸಂಸ್ಥಾನದ ನಂಜಾವಧೂತ ಸ್ವಾಮೀಜಿ



ಶಿರಾ : ನಮ್ಮ ನಾಡಿನ ಸಾಂಸ್ಕೃತಿಕ ಪರಂಪರೆಯ ಪ್ರತೀಕ ದಸರಾ ಉತ್ಸವ, ದುಬೈನಲ್ಲಿ ಕನ್ನಡಿಗರು ಸಡಗರ ಸಂಭ್ರಮದಿಂದ ಆಚರಣೆ ಮಾಡಿ ಭಾರತೀಯ ಟ ಪರಂಪರೆಯನ್ನು ಅನ್ಯ ದೇಶದಲ್ಲಿ ಬೆಳೆಸುತ್ತಿರುವುದು ಕನ್ನಡಿಗರಾದ ನಾವೆಲ್ಲರೂ ಹೆಮ್ಮೆ ಪಡುವಂತಾಗಿದೆ ಎಂದು ಶಿರಾ ತಾಲೂಕಿನ ಪಟ್ಟನಾಯಕನಹಳ್ಳಿ ಶ್ರೀ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ಮಠದ ಸ್ಪಟಿಕಪುರಿ ಮಹಾ ಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ಡಾ. ನಂಜಾವಧೂತ ಸ್ವಾಮೀಜಿ ಹೇಳಿದರು.

ದುಬೈ ದೇಶದ ಬುರ್ ನಗರದಲ್ಲಿ ಹೆಮ್ಮೆಯ ದುಬೈ ಕನ್ನಡ ಸಂಘದ ವತಿಯಿಂದ ನೆಡೆದ ದುಬೈ ದಸರಾ ಕ್ರೀಡಾಕೂಟ ಮತ್ತು ಸಂಸ್ಕೃತಿಕ ಉತ್ಸವ – 2025 ಕಾರ್ಯಕ್ರಮ ದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.ಈ ನಮ್ಮ ಸಂಪ್ರದಾಯ, ಧಾರ್ಮಿಕ ಪರಂಪರೆ, ನಂಬಿಕೆ ಭಾರತೀಯರು ಯಾವ ದೇಶದಲ್ಲಿದ್ದರೂ ಕೂಡ ಇತರರಿಗಿಂತ ವಿಭಿನ್ನ ಎನ್ನುವ ರೀತಿ ಬದುಕುವ ಇಚ್ಛಾ ಶಕ್ತಿ ಹಾಗೂ ಮೌಲ್ಯಯುತ ಜೀವನವನ್ನು ಕಲಿಸಿಕೊಟ್ಟಿದೆ. ಕನ್ನಡ ನಾಡು, ನುಡಿಯ ಸುಗಂಧವನ್ನು ದುಬೈನಲ್ಲಿ ಬೀರುಸುತ್ತಿರುವ ಕನ್ನಡಿಗರ ದಸರಾ ಉತ್ಸವ ನಾವೆಲ್ಲರೂ ಹೆಮ್ಮೆಪಡುವಂತಹದ್ದು ಎಂದರು.

ಈ ಸಂದರ್ಭದಲ್ಲಿ ಹೆಮ್ಮೆಯ ದುಬೈ ಕನ್ನಡ ಸಂಘದ ಅಧ್ಯಕ್ಷ ವರದಾರಾಜ ಗೌಡ, ಕೋಲಾರ ಮಾಜಿ ಸಂಸದ ಎಸ್. ಮುನಿಸ್ವಾಮಿ, ಖ್ಯಾತ ಚಲನಚಿತ್ರ ನಟ ಕೋಮಲ್, ಕಲಾವಿದ ನಾಗೇಂದ್ರ ಕುಮಾರ್, ಜಿಮ್ ತರಬೇತುದಾರ ಜಿಮ್ ರವಿ ಸೇರಿದಂತೆ ದುಬೈನ ಕನ್ನಡ ಅಭಿಮಾನಿಗಳು , ಗಣ್ಯರು, ಕಲಾವಿದರು, ಹೆಮ್ಮೆಯ ದುಬೈ ಕನ್ನಡ ಸಂಘದ ಪದಾಧಿಕಾರಿಗಳು, ಪುಟಾಣಿ ಮಕ್ಕಳು ಹಾಗೂ ಭಕ್ತರು ಉಪಸ್ಥಿತರಿದ್ದರು.

## ಅರ್ಹ ಫಲಾನುಭವಿಗಳಿಗೆ ಶೀಘ್ರವೇ ಹೊಸ ಪಡಿತರ ಚೀಟಿ ವಿತರಣೆ:ಎಂ.ಟಿ. ಕೃಷ್ಣಪ್ಪ



ತುಮಕೂರು: ತುರುವೇಕೆರೆ ತಾಲೂಕಿನಲ್ಲಿ ಹೊಸ ಪಡಿತರ ಚೀಟಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಪೈಕಿ ಅರ್ಹ ಫಲಾನುಭವಿಗಳಿಗೆ ಮುಂದಿನ ಒಂದು ತಿಂಗಳೊಳಗೆ ಪಡಿತರ ಚೀಟಿ ವಿತರಿಸಲಾಗುವುದು ಎಂದು ಶಾಸಕ ಎಂ.ಟಿ. ಕೃಷ್ಣಪ್ಪ ತಿಳಿಸಿದರು.

ಸೋಮವಾರ ಪಟ್ಟಣದ ಲಯನ್ಸ್ ಕ್ಲಬ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 'ಆಹಾರ ಅದಾಲತ್' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ತಾಲೂಕಿನಲ್ಲಿ ಹೊಸ ಪಡಿತರ ಚೀಟಿಗಾಗಿ ಒಟ್ಟು 2,094 ಅರ್ಜಿಗಳು ಸಲ್ಲಿಕೆಯಾಗಿದ್ದು, ಈ ಪೈಕಿ 1654 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಬಾಕಿಯಿರುವ 442 ಅರ್ಜಿಗಳನ್ನು ಪರಿಶೀಲಿಸಿ ಹೊಸ ಪಡಿತರ ಚೀಟಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಸರ್ಕಾರ ಹೊಸದಾಗಿ ಜಾರಿಗೆ ತಂದಿರುವ ಅನ್ನ ಸುವಿಧ ಯೋಜನೆಯಡಿ 75 ವರ್ಷ ಮೇಲ್ಪಟ್ಟ ಏಕ ಸದಸ್ಯರಾಗಿರುವ ವಯೋವೃದ್ಧರ ಮನೆ ಬಾಗಿಲಿಗೆ ಪಡಿತರ ತಲುಪಿಸುವ ಯೋಜನೆ ಅತ್ಯಂತ ಮಹತ್ವದ್ದಾಗಿದೆ. ಇದರಿಂದ ವಯೋವೃದ್ಧರು ನ್ಯಾಯಬೆಲೆ ಅಂಗಡಿಗಳ ಮುಂದೆ ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ತಪ್ಪುತ್ತದೆ. ಆಹಾರ ಅದಾಲತ್ ಕಾರ್ಯಕ್ರಮವು ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ ಪರಿಹರಿಸಲು ಪೂರಕವಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ ತಾಲೂಕು ಮಟ್ಟದ ಕುಂದ ಕೊರತೆಗಳ (ಪುಟ–4)



## ಪಠ್ಯೇತರ ಚಟುವಟಿಕೆಗಳು ಕೂಡ ಮಕ್ಕಳ ಜ್ಞಾನಾರ್ಜನೆಗೆ ಸಹಕಾರಿ

ತುಮಕೂರು: ಪಠ್ಯೇತರ ಚಟುವಟಿಕೆಗಳೂ ಕೂಡ ಮಕ್ಕಳ



ಜ್ಞಾನಾರ್ಜನೆಗೆ ಸಹಕಾರಿಯಾಗುತ್ತದೆ ಎಂದು ತುಮಕೂರು ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಂತಪ್ಪ ಎಂ. ಅಭಿಪ್ರಾಯಪಟ್ಟರು.

ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಜಿಲ್ಲಾ ಬಾಲಭವನ ಸಮಿತಿ ಹಾಗೂ ತಾಲ್ಲೂಕು ಬಾಲಭವನ ಸಮಿತಿ ವತಿಯಿಂದ ಕ್ಯಾತ್ಸಂದ್ರ ನಗರದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಾಶಾಲೆಯಲ್ಲಿ 5–16 ವಯೋಮಾನದ ಮಕ್ಕಳಿಗಾಗಿ ಶನಿವಾರ ಏರ್ಪಡಿಸಲಾಗಿದ್ದ ಓಟದ ಸ್ಪರ್ಧೆ ಮತ್ತು ಆಶುಭಾಷಣ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಪಠ್ಯೇತರ ಚಟುವಟಿಕೆಗಳಿಂದ ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರತರಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ತುಮಕೂರು ನಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ತಾಲ್ಲೂಕು ಬಾಲಭವನ ಸಮಿತಿ ಕಾರ್ಯದರ್ಶಿ ನಾಗರಾಜ್ ಕೆ.(ಪುಟ–2)

## ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಆರೋಗ್ಯಕ್ಕೆ ಕ್ರೀಡೆಬೇಕು



ತಿಪಟೂರು: ಕ್ರೀಡೆಗಳು ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಆರೋಗ್ಯಕ್ಕೆ ಅತ್ಯಗತ್ಯವಾಗಿದ್ದು, ದೇಹವನ್ನು ಆರೋಗ್ಯವಾಗಿ, ಶಕ್ತಿಯುತವಾಗಿ ಇರಿಸುತ್ತದೆ, ಒತ್ತಡವನ್ನು ಕಡಿಮೆ ಮಾಡಲು ಸಹಕಾರಿಯಾಗಿದೆ ಎಂದು ದಸರೀಘಟ್ಟದ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಚಂದ್ರಶೇಖರನಾಥ ಸ್ವಾಮೀಜಿಯವರು ತಿಳಿಸಿದರು. ನಗರದ ಕಲ್ಪತರು ಕ್ರೀಡಾಂಗಣದಲ್ಲಿ ಕಲ್ಪತರು ಸ್ಪೋರ್ಟ್ಸ್ ಕ್ಲಬ್ ಆಯೋಜಿಸಿದ್ದ 39 ನೇ ಹೊನಲು ಬೆಳಕಿನ ಪುರುಷ ಮತ್ತು ಮಹಿಳೆಯರ ಖೋ–ಖೋ ಚಾಂಪಿಯನ್ ಶಿಪ್ ಪಂದ್ಯಾವಳಿಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕ್ರೀಡೆಯಲ್ಲಿ ಭಾಗವಹಿಸುವುದು ಮುಖ್ಯ ಹೊರತು ಬಹುಮಾನ ಪಡೆಯುವುದಲ್ಲ. ಮನುಷ್ಯ ಬದುಕು ಹಸನಾಗಿಸಲು ಕ್ರೀಡೆ ಮತ್ತು ಸಾಂಸ್ಕೃತಿಕತೆ ಎರಡು ಮುಖ್ಯವಾಗಿವೆ.

ಕ್ರೀಡೆಗಳು ಶಿಸ್ತು, ಸಮಯ ನಿರ್ವಹಣೆ, ನಾಯಕತ್ವ, ತಂಡದ ಕೆಲಸಮತ್ತುಆತ್ಮವಿಶ್ವಾಸದಂತಹ ಜೀವನ ಕೌಶಲ್ಯಗಳನ್ನು ಬೆಳೆಸುವ ಮೂಲಕ ವ್ಯಕ್ತಿಯ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ನೆರವಾಗುತ್ತವೆ. ರಾಜ್ಯ, ಅಂತರ ರಾಜ್ಯ ಮಟ್ಟದಲ್ಲಿ ಗ್ರಾಮೀಣ ಪ್ರತಿಭೆಗಳನ್ನು ಗುರುತಿಸಲು ಸ್ಥಳೀಯ ಮಟ್ಟದಲ್ಲಿ ನಡೆಯುವ ಕ್ರೀಡಾಕೂಟಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದರು. ಮಾಜಿ ಶಾಸಕ ನಂಜಾಮರಿ ಮಾತನಾಡಿ ಕ್ರೀಡೆಯು ವಿದ್ಯಾರ್ಥಿಗಳಿಗೆ ಕೇವಲ ದೈಹಿಕ ವ್ಯಾಯಾಮವಲ್ಲ, ಅದು ಯಶಸ್ವಿ, ಆರೋಗ್ಯಕರ ಮತ್ತು ಸಮತೋಲಿತ ಜೀವನಕ್ಕೆ ಒಂದು ಸಂಪೂರ್ಣ ಮಾರ್ಗಸೂಚಿಯಾಗಿದೆ. ತಿಪಟೂರು ಸ್ಪೋರ್ಟ್ಸ್ ಕ್ಲಬ್ ಮೂಲಕ ಕಳೆದ 38 ವಸಂತಗಳಿಂದ ಕ್ರೀಡೆಗೆ ಪ್ರೋತ್ಸಾಹ ನೀಡುತ್ತೀರುವುದು ಅನೇಕ ಪ್ರತಿಭೆಗಳ ಅನಾವರಣಕ್ಕೆ ಮುಕ್ತ ಅವಕಾಶ ಕಲ್ಪಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ವಿವೇಕಾನಂದ ಇಂಟರ್ ನ್ಯಾಷನಲ್ ಶಾಲೆ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ರಾಜ್ಯ ಖೋ–ಖೋ ಸಂಸ್ಥೆಯ ಅಧ್ಯಕ್ಷ ಲೋಕೇಶ್ವರ, ಮಾಜಿ ನಗರಸಭಾ ಸದಸ್ಯರಾದ ಸೊಪ್ಪು ಗಣೇಶ್, ಭಾರತಿ ಮಂಜುನಾಥ್, ರೋಟರಿ ಸಂಸ್ಥೆ ಅಧ್ಯಕ್ಷೆ ವನಿತಾ ಪ್ರಸನ್ನ ಸೇರಿದಂತೆ ಹಲವಾರು ಇದ್ದರು

## ಚಿಂತೆ ಚಿಂತನಗೊಂಡಾಗ ಬಾಳು ವಿಕಾಸ ಶ್ರೀ ರಂಭಾಪುರಿ ಜಗದ್ಗುರುಗಳು

ತುಮಕೂರು:ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಶಿವಜ್ಞಾನದ ಅರಿವು ಮತ್ತು ಆಚರಣೆ ಮುಖ್ಯ. ಚಿಂತೆ ಚಿಂತನಗೊಂಡಾಗ ಬಾಳು ವಿಕಾಸಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಸೋಮವಾರ ನಗರದ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್(ರಿ) ಆಶ್ರಯದಲ್ಲಿ ಜರುಗಿದ ಧನುರ್ಮಾಸದ ಇಷ್ಟಲಿಂಗ ಮಹಾಪೂಜಾ–ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ಚಿನ್ನವಿಲ್ಲದೇ ಬದುಕಬಹುದು. ಆದರೆ ಅನ್ನವಿಲ್ಲದೇ ಬದುಕಲಾಗದು. ಶ್ರದ್ಧಾವಂತರಾದ ಭಾರತೀಯರು ಮಣ್ಣು, ನೀರು, ಗಾಳಿ, ಬೆಂಕಿ, ಕಲ್ಲುಗಳಲ್ಲಿ ದೇವರನ್ನು ಕಂಡು ಪೂಜಿಸಿದವರು. ದೇವರ ಮೇಲಿನ ನಂಬಿಕೆ ಶಾಶ್ವತ ನಂದಾದೀಪ. ನಂಬಿಗೆ ವಿಶ್ವಾಸಗಳನ್ನು ಎಂದಿಗೂ ಕಳೆದುಕೊಳ್ಳಬಾರದು. ಮನಸ್ಸೆಂಬ ಚಂಚಲ ಅಲೆಗಳ ಹೊಯ್ದಾಟವನ್ನು ಶಾಂತ ಪ್ರಶಾಂತಗೊಳಿಸುವ ಮಾರ್ಗವೇ ಆಧ್ಯಾತ್ಮವಾಗಿದೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ. ಮನುಷ್ಯನಿಗೆ ಏನೆಲ್ಲ ಸಂಪತ್ತು ಸಂಪನ್ಮೂಲ ಸೌಲಭ್ಯಗಳಿದ್ದರೂ ಬದುಕು ಹರ್ಷದಾಯಕವಾಗಿಲ್ಲ. ಜ್ಯೋತಿ ಉರಿದು ಬೆಳಕು ಕೊಡುವಂತೆ ಸಂತ ಮಹಂತರು ಬದುಕಿ ಬಾಳುವ ಜನ ಸಮುದಾಯಕ್ಕೆ ಆದರ್ಶ ವಿಚಾರ ಧಾರೆಗಳನ್ನು ಕೊಟ್ಟಿದ್ದಾರೆ. ಅವರು ತೋರಿದ ದಾರಿಯಲ್ಲಿ ನಡೆದರೆ ಸಾಕು. ಜೀವನ ಸಾರ್ಥಕಗೊಳ್ಳುತ್ತದೆ. ತುಮಕೂರು ನಗರದಲ್ಲಿ ಧನುರ್ಮಾಸ ನಿಮಿತ್ಯ ಐದು ದಿನಗಳ ಕಾರ್ಯಕ್ರಮ ಸಂಯೋಜಿಸಿರುವುದು ತಮಗೆ ಹರುಷ ತಂದಿದೆ ಎಂದರು.ಸಮಾರಂಭ ಉದ್ಘಾಟಿಸಿದ ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಮಾತನಾಡಿ ಸಂಘರ್ಷದಿಂದ ಕೂಡಿದ ಮನುಷ್ಯನ ಬಾಳಿಗೆ ನೆಮ್ಮದಿ ಶಾಂತಿ ದೊರಕಲು ಆಧ್ಯಾತ್ಮ ಚಿಂತನಗಳು ಅವಶ್ಯಕ. ಭಾರತೀಯ ಉತ್ಕೃಷ್ಟ ಸಂಸ್ಕೃತಿಯನ್ನು ನಾಡಿನ ಪೀಠ ಮಠಗಳು ಬೆಳೆಸುತ್ತಾ ಬಂದಿವೆ. ಮಾನವ ಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಸಾರಿದ ಶ್ರೀ ರಂಭಾಪುರಿ ಪೀಠದ ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ದೂರದೃಷ್ಟಿ ಮತ್ತು ವಿಶಾಲ ಚಿಂತನಗಳು ನಮ್ಮೆಲ್ಲರ ಬಾಳಿಗೆ ಬೆಳಕು ತೋರುತ್ತಿವೆ. ಇಂದಿನ ಜಗದ್ಗುರುಗಳು ನಿರಂತರ ಶ್ರಮಿಸಿ ನಾಡು ನುಡಿ ಧರ್ಮ ಕಟ್ಟಿ ಬೆಳೆಸುವ ಕಾರ್ಯ ಮಾಡುತ್ತಿರುವುದು ಸಂತೋಷ ಉಂಟು ಮಾಡುತ್ತದೆ ಎಂದರು. ದಿನದರ್ಶಿನಿ ಬಿಡುಗಡೆ ಮಾಡಿದ ತುಮಕೂರು ನಗರ ಶಾಸಕ ಜಿ.ಬಿ. ಜ್ಯೋತಿ ಗಣೇಶ ಮಾತನಾಡಿ ಡಾ. ಎಸ್.ಪರಮೇಶ, ಟಿ.ಬಿ.ಹರೀಶ, ಎನ್.ಬಿ. ಪ್ರದೀಪಕುಮಾರ, ನಿಖಿಲ ರಾಜಣ್ಣ, ಸಿ.ಪಿ.ವಿಜಯ, ಎನ್.ಸಿ.ಸಚಿನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಕೆ.ಬಿ.ಜಯಣ್ಣ, ಕೆ.ಜಿ.ಜಗದೀಶ ಮತ್ತು ಶಂಕರ್ ಮೋಹನ್ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಪಂಚಾಚಾರ್ಯ ಸೇವಾ ಟ್ರಸ್ಟಿನ ಅಧ್ಯಕ್ಷ ಟಿ.ಆರ್.ಸದಾಶಿವಯ್ಯ ಸ್ವಾಗತಿಸಿದರು. ಸಹಕಾರ್ಯದರ್ಶಿ ಜಿ.ಎಸ್.ಸಿದ್ಧರಾಜು ನಿರೂಪಣೆ ಮಾಡಿದರು. ಸಮಾರಂಭದ ನಂತರ ಪ್ರಸಾದ ವಿನಿಯೋಗ ಜರುಗಿತು. ಧನುರ್ಮಾಸದ ನಿಮಿತ್ಯ ಪ್ರಾತ:ಕಾಲದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನಡೆಯಿತು

# ಪ್ರಚೋದನಕಾರಿ ಭಾಷಣ ಮಾಡುವವರು ಮಾತ್ರ ಮಸೂದೆಯನ್ನು ವಿರೋಧಿಸುತ್ತಾರೆ

## ಬಿಜೆಪಿಯವರು ಕುಂಬಳಕಾಯಿ ಕಳ್ಳ ಎಂದರೆ ಹೆಗಲು ಮುಟ್ಟಿ ಏಕೆ ನೋಡಿಕೊಳ್ಳುತ್ತಿದ್ದಾರೆ?–ಸಿದ್ದರಾಮಯ್ಯ ಪ್ರಶ್ನೆ





ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ನಿವಾಸದ ಬಳಿ ಸಾರ್ವಜನಿಕ ಅಹವಾಲು ಸ್ವೀಕರಿಸಿದರು.

ಮೈಸೂರು: ಪ್ರಚೋದನಕಾರಿ ಭಾಷಣ ಮಾಡುವವರು ಮಾತ್ರ ವಿರೋಧಿಸುತ್ತಾರೆ. ಪ್ರಚೋದನಾಕಾರಿ ಭಾಷಣ ಮಾಡದೆ ಹೋದರೆ ಸುಮ್ಮನೆ ಪ್ರಕರಣ ದಾಖಲಿಸುವುದಿಲ್ಲ ಎಂದರು. ಬಿಜೆಪಿಯವರು ಕುಂಬಳಕಾಯಿ ಕಳ್ಳ ಎಂದರೆ ಹೆಗಲು ಮುಟ್ಟಿ ಏಕೆ ನೋಡಿಕೊಳ್ಳುತ್ತಿದ್ದಾರೆ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ದ್ವೇಷ ಭಾಷಣ ತಡೆ ಮಸೂದೆ ಕೆಲವರನ್ನು ಗುರಿಯಾಗಿಸಿಕೊಂಡು ರೂಪಿಸಲಾಗಿದೆ ಎಂದು ಬಿಜೆಪಿ ಆರೋಪಿಸಿರುವ ಬಗ್ಗೆ ಮಾತನಾಡಿ ಕಾಯ್ದೆ ಎಲ್ಲಾ ಪಕ್ಷದವರಿಗೂ ಅನ್ವಯವಾಗುತ್ತದೆ. ಬಿಜೆಪಿ ಮಾತ್ರ ಏಕೆ ವಿರೋಧಿಸುತ್ತಾರೆ? ದ್ವೇಷ ಭಾಷಣದಿಂದ ಸಮಾಜದಲ್ಲಿ ಶಾಂತಿ ನೆಲೆಸುತ್ತದೆಯೇ ? ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಶಾಂತಿ ಹಾಗೂ ಭ್ರಾತೃತ್ವ ಕಾಪಾಡಲು ಈ ಮಸೂದೆ ಜಾರಿ ಮಾಡಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ದ್ವೇಷ ಭಾಷಣ ಹೆಚ್ಚಾಗುತ್ತಿದೆ. ಅದನ್ನು ನಿಯಂತ್ರಿಸಲೆಂದು ಮಸೂದೆ ರೂಪಿಸಿದೆ ಎಂದರು. ಬಿಜೆಪಿ ಮಸೂದೆಯನ್ನು ತೀವ್ರವಾಗಿ ವಿರೋಧಿಸುತ್ತಿರುವುದು ಅವರು ದ್ವೇಷ ಭಾಷಣ ಮಾಡುತ್ತಾರೆ ಎಂಬ ಕಾರಣಕ್ಕಾಗಿ ಎಂದು ಅವರು ಹೇಳಿದರು.

### ಫಲಾನುಭವಿಗಳ ಖಾತೆಗೆ ನೇರವಾಗಿ ಹಣ ವರ್ಗಾವಣೆ ಆಗುವಾಗ ಲಪಟಾಯಿಸುವ ಪ್ರಶ್ನೆ ಉದ್ಭವಿಸುವುದಿಲ್ಲ:

ಫೆಬ್ರವರಿ ಮಾರ್ಚ್ ತಿಂಗಳ ಗೃಹ ಲಕ್ಷ್ಮಿ ಹಣ ಬಿಡುಗಡೆಯಾಗಿಲ್ಲ. ಪರಿಶೀಲಿಸಿ ಬಿಡುಗಡೆ ಮಾಡಲಾಗುವುದು ಎಂದರು. 23 ತಿಂಗಳ ಗೃಹಲಕ್ಷ್ಮಿ ಹಣವನ್ನು ಹಣವಿಲ್ಲದೆ ಕೊಡಲು ಸಾಧ್ಯವಾಗುತ್ತಿತ್ತೇ ?ಎಂದರು. ಗೃಹಲಕ್ಷ್ಮಿ ಹಣವನ್ನು ಲಪಟಾಯಿಸಲಾಗಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಫಲಾನುಭವಿಗಳ ಖಾತೆಗೆ ನೇರವಾಗಿ ಹಣ ವರ್ಗಾವಣೆ ಆಗುವಾಗ ಲಪಟಾಯಿಸುವ ಪ್ರಶ್ನೆ ಎಲ್ಲಿಂದ ಉದ್ಭವವಾಗುತ್ತದೆ ಎಂದರು. ಹಣವನ್ನು ಯಾರು ತೆಗೆದುಕೊಳ್ಳಲಾಗುವುದಿಲ್ಲ ಹಣ ಇನ್ನು ಬಿಡುಗಡೆಯಾಗಿಲ್ಲ ಎಂದರು.

ಪಕ್ಷಕ್ಕಿಂತ ಯಾರು ದೊಡ್ಡವರಲ್ಲ ಎಂಬ ಎಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಅದು ಒಪ್ಪಬೇಕಾದ ವಿಚಾರ. ಯಾರು ಪಕ್ಷಕ್ಕಿಂತ ದೊಡ್ಡವರಾದರೂ ಸಾಧ್ಯವೇ ಇಲ್ಲ ಎಂದರು.

### ನಾಯಕತ್ವ ಬದಲಾವಣೆ ರಾಹುಲ್ ಗಾಂಧಿ ತೀರ್ಮಾನಿಸಬೇಕು:

ನಾಯಕತ್ವ ಬದಲಾವಣೆ ವಿಚಾರವನ್ನು ರಾಹುಲ್ ಗಾಂಧಿಯವರು ತೀರ್ಮಾನಿಸಬೇಕು ಅವರು ಏನು ತೀರ್ಮಾನಿಸುತ್ತಾರೋ ಅದಕ್ಕೆ ನಾವು ಬದ್ಧ ಎಂದು ಸಿಎಂ ತಿಳಿಸಿದರು.

### ಹೈಕಮಾಂಡ್ ತೀರ್ಮಾನಕ್ಕೆ ಬದ್ಧ:ಸಿಎಂ ಪುನರುಚ್ಚಾರ:

ನಾನು ಈ ಬಗ್ಗೆ ಪಕ್ಷದ ವರಿಷ್ಠರ ಬಳಿ ಮಾತನಾಡಿದ್ದು, ನಾವು ಈ ಬಗ್ಗೆ ತೀರ್ಮಾನಿಸುತ್ತೇವೆ ಎಂದು ಹೇಳಿದ್ದಾರೆ ಅವರ ತೀರ್ಮಾನಕ್ಕೆ ನಾವು ಬದ್ಧ ಎಂದು ಮುಖ್ಯಮಂತ್ರಿಗಳು ಪುನರುಚ್ಚರಿಸಿದರು.

### ನಾಯಕತ್ವ ಬದಲಾವಣೆ; ಮಾಧ್ಯಮಗಳ ಸೃಷ್ಟಿ:

ಮಾಧ್ಯಮದವರೇನಾಯಕತ್ವಬದಲಾವಣೆಯ ಬಗ್ಗೆ ಹೆಚ್ಚಾಗಿ ಚರ್ಚಿಸುತ್ತಿದ್ದಾರೆ. ಇಷ್ಟೊಂದು ಪ್ರಶ್ನೆ ಕೇಳಬೇಕಾದ ಅಗತ್ಯ ಏನಿದೆ. ವಿಧಾನಸಭೆಯಲ್ಲಿ ಈ ಬಗ್ಗೆ ಹೇಳಿದ ಮೇಲು ಪುನಹ ಚರ್ಚೆ ಮಾಡುವ ಅಗತ್ಯವಿಲ್ಲ ಎಂದರು.

### ಪಕ್ಷದ ಅಧ್ಯಕ್ಷರನ್ನು ಭೇಟಿ ಮಾಡಿದರೆ ತಪ್ಪೇನು?

ಮಾಜಿ ಸಚಿವ ಕೆ. ಎನ್ ರಾಜಣ್ಣ ನಿನ್ನೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿದ್ದಾರೆ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ ಭೇಟಿ ಮಾಡಲಿ, ಡಿ.ಕೆ ಶಿವಕುಮಾರ್ ಅವರು ಪಕ್ಷದ ಅಧ್ಯಕ್ಷರಾಗಿದ್ದು ಅವರನ್ನು ಭೇಟಿ ಮಾಡುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

### ಅಧಿಕಾರದಲ್ಲಿದ್ದಾಗ ನಾನು ಮಾಡಿದೆ, ಅವರು ಮಾಡಿದರು ಎನ್ನುವುದು ಮುಖ್ಯವಲ್ಲ:

ರಾಜಣ್ಣ ಅವರನ್ನು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಮಾಡಿದ್ದು ನಾನೇ ಎಂದು ಉಪಮುಖ್ಯಮಂತ್ರಿಗಳು ಹೇಳಿದ್ದಾರೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಅಧಿಕಾರದಲ್ಲಿದ್ದಾಗ ನಾನು ಮಾಡಿದೆ, ಅವರು ಮಾಡಿದರು ಎನ್ನುವುದು ಮುಖ್ಯವಲ್ಲ. ಆದರ ಪ್ರಶ್ನೆಯೇ ಇಲ್ಲ. ಎಸ್.ಎಂ ಕೃಷ್ಣಾ ಅವರು ಆಗ ಮುಖ್ಯಮಂತ್ರಿಗಳಿದ್ದರು, ಸರ್ಕಾರ ಮಾಡಿತ್ತು ಎಂದರು.

ಬಜೆಟ್ ಸಿದ್ಧತೆ ನಡೆದಿದೆಯೇ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ ತಯಾರಿ ನಡೆಸುವಾಗ ತಿಳಿಸುವುದಾಗಿ ಮುಖ್ಯಮಂತ್ರಿಗಳು ಹೇಳಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ವಿದ್ಯಾವಂತರಿಗೆ ವೈಜ್ಞಾನಿಕ ಹಾಗೂ ವೈಚಾರಿಕ ಚಿಂತನೆಯಿರಬೇಕು

## ದ್ವೇಷ ಬಿತ್ತುವ ಶಕ್ತಿಗಳ ವಿರುದ್ಧ ಹೋರಾಟ ನಮ್ಮೆಲ್ಲರ ಕರ್ತವ್ಯ: ಸಿದ್ದರಾಮಯ್ಯ



ಮಂಡ್ಯ: ಮನುಷ್ಯ ಮನುಷ್ಯನನ್ನು ಪ್ರೀತಿಸುವ ಮನುಷ್ಯ ಸಮಾಜ ನಿರ್ಮಾಣವಾಗಬೇಕು. ದ್ವೇಷ ಬಿತ್ತುವ ಶಕ್ತಿಗಳ ವಿರುದ್ಧ ಹೋರಾಟ ನಮ್ಮೆಲ್ಲರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಮಳವಳ್ಳಿಯದಲ್ಲಿ ಆಯೋಜಿಸಲಾಗಿದ್ದ ಶ್ರೀ ಮತ್ತು ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಸಂಸ್ಥಾಪನಾಚಾರ್ಯ ಆದಿ ಜಗದ್ಗುರು ಶ್ರೀ ಶಿವರಾತ್ರಿಶ್ವರ ಶಿವಯೋಗಿಗಳ 1066ನೇ ಜಯಂತಿ ಮಹೋತ್ಸವ ಸಮಾರೋಪ ಸಮಾರಂಭ ದಲ್ಲಿ ಭಾಗವಹಿಸಿ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು.

ಆದಿ ಜಗದ್ಗುರು ಶ್ರೀ ಶಿವರಾತ್ರಿಶ್ವರ ಶಿವಯೋಗಿಗಳ ಜಯಂತೋತ್ಸವಗಳು ಹಲವು ತಾಲ್ಲೂಕು ಮತ್ತುಜಿಲ್ಲಾ ಕೇಂದ್ರಗಳಲ್ಲಿ ನಡೆದುಕೊಂಡು ಬರುತ್ತಿದ್ದು, ಮುಂದಿನ ವರ್ಷ ಗುಂಡ್ಲುಪೇಟೆಯಲ್ಲಿ ನಡೆಯಲಿರುವುದು ಸಂತೋಷದ ವಿಚಾರ. ಈ ಕಾರ್ಯಕ್ರಮ ಆಯೋಜನೆಯಲ್ಲಿ ಸಹಕರಿಸಿದ ಶಾಸಕರಾದ ಶ್ರೀ ನರೇಂದ್ರಸ್ವಾಮಿಯವರಿಗೆ ಅಭಿನಂದನೆಗಳು. ಈ ದೇಶದಲ್ಲಿ ಹಲವಾರು ಸಾಧುಸಂತರು, ಸೂಫಿ ಸಂತರು ಸಮಾಜದ ಬದಲಾವಣೆಗೆ ಶ್ರಮಿಸಿದ್ದು, ಈ ಪ್ರಯತ್ನದಲ್ಲಿ ಶ್ರೀಗಳು ಮೇಲ್ಪಂಕ್ತಿಯಲ್ಲಿ ನಿಲ್ಲುತ್ತಾರೆ ಎಂದರು.

### ಯಾವುದೇ ಧರ್ಮ ದ್ವೇಷವನ್ನು ಬೋಧಿಸುವುದಿಲ್ಲ:

ಸಮಾಜದಲ್ಲಿ ವಿವಿಧ ಜಾತಿಧರ್ಮಗಳಿದ್ದು, ಅಸಮಾನತೆಯ ಹುಟ್ಟಿಗೆ ಕಾರಣವಾಗಿದೆ. ಈ ಅಸಮಾನತೆ ನಿವಾರಣೆಯಾಗದೇ ಸಮಾಜದಲ್ಲಿ ಶಾಂತಿ ಸ್ಥಾಪನೆ ಅಸಾಧ್ಯ. ಬಸವಾದಿ ಶರಣರು ಮನುಷ್ಯ ಸಮಾಜ, ಸಮಾನ ಸಮಾಜ ನಿರ್ಮಾಣವಾಗಬೇಕೆಂದು ಅವಿರತ ಶ್ರಮಿಸಿದರು. ಆದಾಗ್ಯೂ ಸಮಾಜದಲ್ಲಿ ಜಾತಿವ್ಯವಸ್ಥೆ ಸಂಪೂರ್ಣ ನಿರ್ಮೂಲನೆಯಾಗಿಲ್ಲ. ಕವಿ ಕುವೆಂಪು ಹೇಳಿದಂತೆ ಸರ್ವಜನಾಂಗದ ಶಾಂತಿಯ ತೋಟ ಸ್ಥಾಪನೆಯಾಗಲು ಮಾನವೀಯ ಸಮಾಜ ನಿರ್ಮಾಣವಾಗಬೇಕು. ಯಾವುದೇ ಧರ್ಮವಾಗಲಿ ಪ್ರೀತಿ ಧರ್ಮವನ್ನು ಬೋಧಿಸುತ್ತವೆಯೇ ಹೊರತು ದ್ವೇಷವನ್ನು ಬೋಧಿಸುವುದಿಲ್ಲ. ಇದು ನಮ್ಮ ಸಂಸ್ಕೃತಿ.ಮನುಷ್ಯ ಮನುಷ್ಯನನ್ನು ಪ್ರೀತಿಸುವ ಮನುಷ್ಯ ಸಮಾಜ ನಿರ್ಮಾಣವಾಗಬೇಕು. ಸಮಾಜದಲ್ಲಿ ದ್ವೇಷಾಸೂಯೆ ಬಿತ್ತುವ ಅನೇಕ ಶಕ್ತಿಗಳು ಸಮಾಜದಲ್ಲಿ ಇವೆ. ಅಂತಹ ಶಕ್ತಿಗಳ ವಿರುದ್ಧ ಹೋರಾಡುವುದು ನಮ್ಮೆಲ್ಲರ ಕರ್ತವ್ಯ ಎಂದರು.

### ಸಮಾಜದಲ್ಲಿ ಸಮಾಜಮುಖಿಯಾಗಿ ಬಾಳುವುದು ಮುಖ್ಯ:

ಜಡತ್ವದ ಜಾತಿ ವ್ಯವಸ್ಥೆ ನಿವಾರಣೆಯಾಗಬೇಕಾದರೆ ಆರ್ಥಿಕ , ಸಾಮಾಜಿಕ ಶಕ್ತಿ ಬಂದಾಗ ಮಾತ್ರ ಸಮಸಮಾಜ ನಿರ್ಮಿಸಲು ಸಾಧ್ಯ. ಮೌಢ್ಯಗಳಿಂದ ದೂರವಾಗಿ ಜಾತಿರಹಿತ, ವರ್ಗರಹಿತ ಸಮಾಜ ನಿರ್ಮಾಣವಾಗಬೇಕು ಎಂದು ಬಸವಾದಿಶರಣರರು ತಿಳಿಸಿದರು. ಇಂದಿಗೂ ಹಲವರು ಮೌಢ್ಯಗಳನ್ನು ನಂಬುತ್ತಾರೆ. ಹುಟ್ಟು ಸಾವಿನ ನಡುವಿನ ಜೀವನವನ್ನು ನಾವು ಸಾರ್ಥಕಗೊಳಿಸಿಕೊಳ್ಳಬೇಕು. ವಿದ್ಯಾವಂತರಿಗೆ ವೈಜ್ಞಾನಿಕ ಹಾಗೂ ವೈಚಾರಿಕ ಚಿಂತನೆಯಿರಬೇಕು. ಸಮಾಜದಲ್ಲಿ ಸಮಾಜಮುಖಿಯಾಗಿ ಬಾಳುವುದು ಮುಖ್ಯ ಮನುಷ್ಯ ಮನುಷ್ಯರ ನಡುವಿನ ದ್ವೇಷ ಅಮಾನವೀಯ ಎಂದರು.

### ಪ್ರತಿಯೊಬ್ಬರೂ ಉತ್ಪಾದನೆಯಲ್ಲಿ ಭಾಗವಹಿಸಬೇಕು:

ದೇಶಕ್ಕೆ ಸಂವಿಧಾನ ಜಾರಿಗೆ ಬರುವ ಸಂದರ್ಭದಲ್ಲಿ ವೈರುಧ್ಯತೆಯಿರುವ ಸಮಾಜಕ್ಕೆ ಕಾಲಿಡುತ್ತಿದ್ದು, ಇದು ಬದಲಾಗಬೇಕಾದರೆ, ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವಂತಿರಬೇಕು. ಮನುಷ್ಯನ ಕಷ್ಟ ಸುಖಗಳಿಗೆ ಸ್ಪಂದಿಸುವುದೇ ದಾಸೋಹ. ದೇ. ಜ . ಗೌ ಅವರು ಕಾಯಕ ಎಂದರೆ ಉತ್ಪಾದನೆ, ದಾಸೋಹ ಅಂದರೆ ವಿತರಣೆ ಎಂದು ಹೇಳಿದ್ದರು. ಪ್ರತಿಯೊಬ್ಬರೂ ಉತ್ಪಾದನೆಯಲ್ಲಿ ಭಾಗವಹಿಸಬೇಕು. ಒಬ್ಬರು ಉತ್ಪಾದಿಸಿದ್ದನ್ನು ಮತ್ತೊಬ್ಬರು ಅನುಭವಿಸುವಂತಾಗಬಾರದು ಎಂದರು. ಆಗ ಮಾತ್ರ ಸಮಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದರು.

### ಪ್ರಜಾಪ್ರಭುತ್ವ ಗಟ್ಟಿಯಾಗಿ ಉಳಿಯಲು ಅಸಮಾನತೆ ಹೋಗಬೇಕು:

ಅಸಮಾನತೆ ಹೋಗಬೇಕಾದರೆ, ಆರ್ಥಿಕ, ಸಾಮಾಜಿಕ ಶಕ್ತಿ ಬರಬೇಕು. ಇಲ್ಲದಿದ್ದರೆ ಸ್ವಾತಂತ್ರ್ಯ ಗಳಿಸಿದ್ದು ಯಶಸ್ವಿಯಾಗುವುದಿಲ್ಲ. ಅಸಮಾನತೆಯಿಂದ ನರಳುವವರು ಸ್ವಾತಂತ್ರ್ಯ ಸೌಧವನ್ನು ಧ್ವಂಸ ಮಾಡ್ತಾರೆ ಎಂದು ಬಾಬಾ ಸಾಹೇಬ್ ಅಂಬೇಡ್ಕರ್ ಹೇಳಿದ್ದಾರೆ. ಪ್ರಜಾಪ್ರಭುತ್ವ ಗಟ್ಟಿಯಾಗಿ ಉಳಿಯಲು ಅಸಮಾನತೆ ಹೋಗಬೇಕು ಎಂದು ಅವರು ಎಚ್ಚರಿಕೆ ನೀಡಿದ್ದರು. ಸರ್ವ ಜನಾಂಗದ ಶಾಂತಿಯ ತೋಟ ನಿರ್ಮಾಣ ಮಾಡುವ ಪ್ರಯತ್ನವನ್ನು ಎಲ್ಲರೂ ಮಾಡೋಣ ಎಂದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಗಣಪತಿ ಪ್ರೌಢಶಾಲೆಯ ಹಳೇ ವಿದ್ಯಾರ್ಥಿಗಳುಗುರುಗಳ ಸಮಾಗಮ



ತುಮಕೂರು: ಕಳೆದ ನಾಲ್ಕು ದಶಕಗಳ ಬಳಿಕ ತಾವು ಓದಿದ ಶಾಲೆಯಲ್ಲಿ ತಮಗೆ ಪಾಠ ಹೇಳಿದ ಗುರುಗಳು ಹಾಗೂ ತಮ್ಮೊಂದಿಗೆ ಕಲಿತ ಸ್ನೇಹಿತರೊಂದಿಗೆ ಸಮಾಗಮವಾಗುವ ಮೂಲಕ ಹಳೇ ವಿದ್ಯಾರ್ಥಿಗಳು ತಾವು ವ್ಯಾಸಂಗ ಮಾಡಿದ ಅವಧಿಯ ನೆನಪಿನ ಬುತ್ತಿಯನ್ನು ತೆರೆದಿಟ್ಟು ಸಂಭ್ರಮಿಸಿದ ಕ್ಷಣಕ್ಕೆ ಹೆಬ್ಬೂರಿನ ಗಣಪತಿ ಪ್ರೌಢಶಾಲೆ ಸಾಕ್ಷಿಯಾಯಿತು.

ಈಗಾಗಲೇ ಅರವತ್ತರ ಆಸುಪಾಸಿನಲ್ಲಿರುವ ಗಣಪತಿ ಪ್ರೌಢಶಾಲೆಯ ಹಳೇ ವಿದ್ಯಾರ್ಥಿಗಳು ಪರಸ್ಪರ ತಮ್ಮ ಬಾಲ್ಯದ ನೆನಪಿನ ಬುತ್ತಿಯನ್ನು ತೆರೆದಿಟ್ಟು ಬದುಕಿನ ಜಂಜಾಟ, ನೌಕರಿ ವಿಚಾರ, ಮಕ್ಕಳು-ಮೊಮ್ಮಕ್ಕಳ ವಿಚಾರ ಎಲ್ಲ ವಿಚಾರಗಳನ್ನು ವಿನಿಮಯ ಮಾಡಿಕೊಂಡು ಸಂಭ್ರಮಪಟ್ಟರು.

ಬಾಲ್ಯ ಸ್ನೇಹಿತರೆಲ್ಲಾ ನಾಲ್ಕು ದಶಕಗಳ ಬಳಿಕ ಒಟ್ಟಾಗಿ ಸೇರಿ ಒಬ್ಬರಿಗೊಬ್ಬರು ಮಾತನಾಡುವಾಗ ಅವರೆಲ್ಲರ ನೆನಪಿನ ಪುಸ್ತಕದ ಪುಟ ತೆರೆದುಕೊಂಡು ಎಲ್ಲರೂ ಭಾವುಕರಾಗಿದ್ದರು.

ಇವರೆಲ್ಲಾ ಗಣಪತಿ ಪ್ರೌಢಶಾಲೆಯ 1980-81ನೇ ಸಾಲಿನ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಾಗಿದ್ದು, ಇವರು ಒಟ್ಟಾಗಿ ಸೇರಿ ಸ್ನೇಹ ಸಮ್ಮಿಲನ ಆಯೋಜಿಸಿಕೊಂಡು ಬಾಲ್ಯವನ್ನು ನೆನೆದರು. ಅಂದಿನ 153 ವಿದ್ಯಾರ್ಥಿಗಳ ಪೈಕಿ ಸುಮಾರು 70 ಮಂದಿ ಕಾರ್ಯಕ್ರಮಕ್ಕೆ ಆಗಮಿಸಿದ್ದು, ಕೆಲವರಂತೂ ಮಕ್ಕಳು, ಮೊಮ್ಮಕ್ಕಳು, ಅಳಿಯಂದಿರ ಜತೆ ಆಗಮಿಸಿ ತಮ್ಮ ಖುಷಿಯನ್ನು ಇಮ್ಮಡಿಗೊಳಿಸಿಕೊಂಡರು.

ಎಲ್ಲರೂ ಒಟ್ಟಿಗೆ ಕೂತು ಬಾಲ್ಯ ನೆನೆದು ಊಟ ಮಾಡಿದರು. ಪ್ರತಿಯೊಬ್ಬರನ್ನೂ ವೇದಿಕೆಗೆ ಆಹ್ವಾನಿಸಿ ವೈಯುಕ್ತಿಕ ಪರಿಚಯ ಮಾಡಿಸಲಾಯಿತು. ನೆನಪಿನ ಕಾಣಿಕೆ ಕೊಡಲಾಯಿತು. ಗ್ರೂಪ್ ಫೋಟೋ ತೆಗೆಸಿಕೊಂಡು ಸಂಭ್ರಮಿಸಿದರು. ಮೊಬೈಲ್ ನಂಬರ್‌ಗಳ ವಿನಿಮಯ ಕೂಡ ಆಗಿ ಹೋಯಿತು. ಮರೀಬೇಡ ಕಾಲ್ ಮಾಡು, ಮೊಮ್ಮಗ ಬಂದಾಗ ವಿಡಿಯೋ ಕಾಲ್ ಮಾಡೋಕೆ ಹೇಳ್ತಿನಿ... ಈ ಸಲ ಹಬ್ಬಕ್ಕೆ ಬಾ ಕರಿತೀನಿ.. ಮೊಮ್ಮಗಳ ಮದ್ವೆಗೆ ಮಿಸ್ ಮಾಡ್ಬೇಡ, ಹೇ ಮಗನಿಗೆ ಒಂದು ಹೆಣ್ಣು ಇದ್ರೆ ಹೇಳು... ಎಂಬೆಲ್ಲಾ ವಿಚಾರಗಳು ವಿನಿಮಯವಾಗಿದ್ದು ಕಂಡು ಬಂತು.

ಬಾಲ್ಯದ ಸ್ನೇಹಿತರೆಲ್ಲಾ ಒಟ್ಟಾಗಿ ಸೇರಬೇಕು ಎಂದು ನಿಶ್ಚಯಿಸಿ ಸತತ ಒಂದು ತಿಂಗಳು ಎಲ್ಲರ ಹುಡುಕಾಟ ನಡೆಸಿದೆವು. ಶಾಲೆಯ ದಾಖಲಾತಿ ಪುಸ್ತಕ ತೆಗೆದು ವಿಳಾಸ ಮತ್ತು ತಂದೆಯ ಹೆಸರು ಬರೆದುಕೊಂಡು ಹುಡುಕಾಟ ನಡೆಸಿದೆವು. ಕೊನೆಗೆ 70 ಜನ ಸಿಕ್ಕಿದರು. ಜತೆಗೆ ನಮಗೆ ಪಾಠ ಹೇಳಿದ ಮೂವರು ಶಿಕ್ಷಕರೂ ಇದ್ದಾರೆ ಎಂದು ಹಳೇ ವಿದ್ಯಾರ್ಥಿ ಎಚ್.ಜಿ. ಪ್ರಾಣೇಶ್‌ಕುಮಾರ್ ಹೇಳಿದರು.

ಗುರುವಂದನೆನಿವೃತ್ತ ಶಿಕ್ಷಕರಾದ ಕೆ.ಎ.ನಾಗರಾಜ ರಾವ್, ಕೆ.ವಿ.ಜಯರಾಮ್, ಉಮಾಮಹೇಶ್ ಕಾರ್ಯಕ್ರಮಕ್ಕೆ ಆಗಮಿಸಿ ತಾವು ಪಾಠ ಹೇಳಿಕೊಟ್ಟ ವಿದ್ಯಾರ್ಥಿಗಳೊಂದಿಗೆ ಕೆಲ ಹೊತ್ತು ಕಾಲ ಕಳೆದರು. ನಂತರ ಶಿಷ್ಯರು ಗುರುಗಳಿಗೆ ಗುರುವಂದನೆ ಸಲ್ಲಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಿ ಆಶೀರ್ವಾದ ಪಡೆದರು.

ಗುರುವಂದನೆಹಾಗೂಸ್ನೇಹಸಮ್ಮಿಲನ ಕಾರ್ಯಕ್ರಮ ಮುಕ್ತಾಯಗೊಂಡು ಪರಸ್ಪರ ಬೀಳ್ಕೊಟ್ಟಾಗ ಎಲ್ಲರೂ ಭಾವುಕರಾದರು.

ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ನರಸಿಂಹರಾಜು, ಹನುಮಂತಯ್ಯ, ಆರ್ಯ, ನಂಜಪ್ಪ, ಹೆಚ್.ಆರ್. ನಾಗರಾಜು, ನಿವೃತ್ತ ಕೆಎಎಸ್ ಅಧಿಕಾರಿ ನರಸಿಂಹಮೂರ್ತಿ, ಮುಖ್ಯ ಶಿಕ್ಷಕ ವೆಂಕಟೇಶ್ ಸೇರಿದಂತೆ ಸುಮಾರು 70 ಮಂದಿ ಹಳೇ ವಿದ್ಯಾರ್ಥಿಗಳು ಭಾಗವಹಿಸಿದ್ದರು

# ಹಳ್ಳಿ ಬದುಕಿನ ತಲ್ಲಣಗಳ ಪಾಳೆಗಿರಿ ಸಿನಿಮಾಗೆ ಸಿದ್ಧತೆ ಸಲೀಂನಿರ್ದೇಶನ,ತುಮಕೂರು ಸುತ್ತಮುತ್ತ ಚಿತ್ರೀಕರಣ

ತುಮಕೂರು: ತುಮಕೂರಿನ ಉತ್ಸಾಹಿ ನಿರ್ದೇಶಕ ಕಲೀಂ ಅವರು ನಿರ್ದೇಶಿಸುತ್ತಿರುವ ಪಾಳೆಗಿರಿ ಸಿನಿಮಾ ಸಿದ್ಧವಾಗುತ್ತಿದೆ. ಯುವ ನಟ ಜೆ.ಪಿ.ಜಯಪ್ರಕಾಶ್ ನಾಯಕರಾಗಿ, ಕಾವ್ಯ ನಾಯಕಿಯಾಗಿ ಅಭಿನಯಿಸುತ್ತಿದ್ದಾರೆ. ಗ್ರಾಮೀಣ ಪ್ರದೇಶದ ಸಂಬಂಧಗಳ ಸೂಕ್ಷ್ಮ ವಿಚಾರಗಳನ್ನು ಸಿನಿಮಾ ಕಥೆ ಒಳಗೊಂಡಿದೆ. ಪರಿಹಾರ ಕಾಣದ ರೈತರ ಸಮಸ್ಯೆಗಳು, ನಶಿಸುತ್ತಿರುವ ಹಳ್ಳಿ ಬದುಕಿನ ಬಾಂಧವ್ಯಗಳನ್ನು ಕಟ್ಟಿಕೊಡುವ ಸಂದೇಶವನ್ನು ಸಿನಿಮಾ ಸಾರುತ್ತದೆ ಎಂದು ಹೇಳಿದರು.



ನಿರ್ದೇಶಕ ಕಲೀಂ ಮಾತನಾಡಿ, ಸಂಬಂಧ, ಸಮಸ್ಯೆಗಳ ವಸ್ತು ಒಳಗೊಂಡ ಈ ಸಿನಿಮಾದ ಕಥೆ, ಚಿತ್ರಕತೆ ರಚಿಸಿರುವ ಕಲೀಂ ಅವರು ನಿರ್ದೇಶನದ ಹೊಣೆ ಹೊತ್ತಿದ್ದಾರೆ.

ಸೋಮವಾರ ನಗರದ ಸದಾಶಿವನಗರದ ಗೋಲ್ಡನ್ ಪ್ಯಾಲೆಸ್ ಸಭಾಂಗಣದಲ್ಲಿ ಚಿತ್ರ ತಂಡವು ಕಲಾವಿದರ ಆಯ್ಕೆಗಾಗಿ ಫೋಟೊ ಶೂಟ್ ನಡೆಸಿತು. ಈ ವೇಳೆ ನಾಯಕ ನಟ ಜಯಪ್ರಕಾಶ್, ನಾಯಕಿ ಕಾವ್ಯ, ಕಾಮಿಡಿ ಕಿಲಾಡಿಗಳು ಖ್ಯಾತಿಯ ಮಡನೂರು ಮನು, ಹಿರಿಯ ಕಲಾವಿದ ತುಮಕೂರು ಮೋಹನ್, ಧನಲಕ್ಷ್ಮಿ, ಸ್ಯಾಂಡಲ್‌ವುಡ್ ಅಕಾಡೆಮಿಯ ಆನಂದ್, ಸಲೀಮ್, ಜಮೀಲ್ ರಾಜ್, ಶಿಲ್ಪ ಶಾಂತಕುಮಾರ್ ಮೊದಲಾದ ವರು ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ನಾಯಕ ನಟ ಜಯಪ್ರಕಾಶ್, ನಿರ್ದೇಕ ಕಲೀಂ ಅವರು ಉತ್ತಮ ಕಥೆ ಸಿದ್ಧಪಡಿಸಿದ್ದಾರೆ. ಆಧುನಿಕತೆಯ ಹೊಡೆತದಲ್ಲಿ ಗ್ರಾಮೀಣ ಪ್ರದೇಶದ ಜನರ ಬದುಕಿನ ತಲ್ಲಣ, ಹೋರಾಟ, ಇದೊಂದು ಹಳ್ಳಿ ಬದುಕಿನ ಸಿನಿಮಾ, ತುಮಕೂರು ಜಿಲ್ಲೆಯ ವಿವಿಧ ಹಳ್ಳಿಗಳಲ್ಲೇ ಚಿತ್ರೀಕರಣ ಮಾಡಲು ತೀರ್ಮಾನಿಸಲಾಗಿದೆ. ಇದರಲ್ಲಿ ಎರಡು ದಿನ ಮಾತ್ರ ಶಿವಮೊಗ್ಗ ಜಿಲ್ಲೆಯಲ್ಲಿ ಚಿತ್ರೀಕರಣಕ್ಕೆ ಸಿದ್ಧ ಮಾಡಲಾಗಿದೆ. ಎಲ್ಲರೂ ಮೆಚ್ಚುವ ಕುಟುಂಬ ಸಮೇತ ನೋಡುವ ಸಿನಿಮಾವನ್ನು ರೂಪಿಸುವುದಾಗಿ ಹೇಳಿದರು.

ಮೈಸೂರು ಟಾಕೀಸ್ ಸಂಸ್ಥೆಯಡಿ ನಿರ್ಮಾಪಕ ಚೇತನ್ ರಮೇಶ್ ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದಾರೆ. ಹಲವಾರು ಕಿರುಚಿತ್ರಗಳನ್ನು ನಿರ್ದೇಶಿಸಿ ಹೆಸರಾಗಿರುವ ಕಲೀಂ ಅವರು ನಿರ್ದೇಶಿಸಿರುವ ಜಾನ್ ಬಸ್ತಿ ಸಿನಿಮಾ ತೆರೆಕಾಣಲು ಸಿದ್ಧವಾಗಿದೆ. ಪಾಳೆಗಿರಿ ಇವರ ನಿರ್ದೇಶನದ ಎರಡನೇ ಚಿತ್ರವಾಗಿದೆ.ಹಿರಿಯ ಕಲಾವಿದರಾದ ಶೋಭರಾಜ್, ತಬಲ ನಾಣಿ, ತುಮಕೂರು ಮೋಹನ್, ಮಡನೂರು ಮನು, ಇರ್ಫಾನ್, ಸಲೀಂ, ಧನಲಕ್ಷ್ಮಿ ಮೊದಲಾದವರು ಸಿನಿಮಾದ ತಾರಾಗಣದಲ್ಲಿದ್ದಾರೆ.

# ಚಿರತೆ ದಾಳಿಗೆ ಮಹಿಳೆ ಬಲಿ: ಸಂತ್ರಸ್ತ ಕುಟುಂಬಕ್ಕೆ 5 ಲಕ್ಷ ರೂ. ತಾತ್ಕಾಲಿಕ ಪರಿಹಾರ ಚೆಕ್ ವಿತರಣೆ

ತುಮಕೂರು: ತುರುವೇಕೆರೆ ತಾಲ್ಲೂಕಿನ ದಬ್ಬೇಘಟ್ಟ ಹೋಬಳಿಯ ಅರೇಮಲ್ಲೇನಹಳ್ಳಿ ಗ್ರಾಮದಲ್ಲಿ ಭಾನುವಾರ ಸಂಜೆ ಚಿರತೆ ದಾಳಿಗೆ ತುತ್ತಾಗಿ ಮೃತಪಟ್ಟ ಸುಜಾತ (48) ಅವರ ಕುಟುಂಬಕ್ಕೆ ಸೋಮವಾರ 5 ಲಕ್ಷ ರೂ.ಗಳ ತಾತ್ಕಾಲಿಕ ಪರಿಹಾರ ಚೆಕ್ಕನ್ನು ತುರುವೇಕೆರೆ ಶಾಸಕ ಎಂ.ಟಿ.ಕೃಷ್ಣಪ್ಪ ವಿತರಿಸಿದರು. ಮೃತರಿಗೆ ಒಬ್ಬ ಮಗ ಹಾಗೂ ಮಗಳಿದ್ದು, ಸೋಮವಾರ ಸ್ಥಳೀಯ ಶಾಸಕರು, ಜಿಲ್ಲಾಧಿಕಾರಿಗಳು ಉಳಿದ 15 ಲಕ್ಷ ರೂ.ಗಳ ಪರಿಹಾರ ಮೊತ್ತವನ್ನು ಮುಂದಿನ ಎರಡು ವಾರಗಳಲ್ಲಿ ಪಾವತಿಸಲಾಗುವುದು ಎಂದು ಭರವಸೆ ನೀಡಿದರು.



ಘಟನೆಯ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತುರುವೇಕೆರೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ ಉಪವಿಭಾಗ ಮಟ್ಟದಲ್ಲಿ ಚಿರತೆ ಹಾಗೂ ಇತರೆ ಕಾಡುಪ್ರಾಣಿಗಳ ಹಾವಳಿ ತಡೆಗಟ್ಟಲು ವಿಶೇಷ 'ಟಾಸ್ಕ್ ಫೋರ್ಸ್' ಸಮಿತಿ ರಚಿಸಿ, ದಾಳಿ ನಡೆದ ಸ್ಥಳದಲ್ಲಿ ಅರಣ್ಯ ಅಧಿಕಾರಿಗಳು ಬೀಡು ಬಿಟ್ಟು, ಕೂಡಲೇ ಚಿರತೆಯನ್ನು ಸೆರೆ ಹಿಡಿಯಲು ವ್ಯಾಪಕ ಕೋಂಬಿಂಗ್ ನಡೆಸುವಂತೆ ಅರಣ್ಯ ಇಲಾಖೆಯ ಅಧಿಕಾರಿಗೆ ಸೂಚನೆ ನೀಡಿದರು.ಗ್ರಾಮ ಪಂಚಾಯಿತಿ ಕಸ ವಿಲೇವಾರಿ ವಾಹನಗಳ ಮೂಲಕ ಚಿರತೆ ಹಾವಳಿ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು, ಸಾರ್ವಜನಿಕರು ಬೆಳಗಿನ ಜಾವ ಹಾಗೂ ಸೂರ್ಯಾಸ್ತದ ನಂತರ ತೋಟಗಳಿಗೆ ತೆರಳದಂತೆ ನಿರ್ದೇಶನ ನೀಡಿದರಲ್ಲದೇಸಾರ್ವಜನಿಕರು ತುರ್ತು ಸಂದರ್ಭದಲ್ಲಿ 9449872599 (ಸ್ಮಾರ್ಟ್ ಸಿಟಿ ಸಹಾಯವಾಣಿ) ಸಂಖ್ಯೆಯನ್ನು 24/7 ಸಂಪರ್ಕಿಸಬಹುದು ಎಂದು ತಿಳಿಸಿದರು. ಮೃತರ ಇಬ್ಬರು ಮಕ್ಕಳಲ್ಲಿ ಒಬ್ಬರ ಶಿಕ್ಷಣಕ್ಕಾಗಿ ಪ್ರತಿ ತಿಂಗಳು 4,000 ರೂ.ಗಳ ಧನಸಹಾಯ ಹಾಗೂ ಅರ್ಹತೆಗನುಗುಣವಾಗಿ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಡಾಟಾ ಎಂಟ್ರಿ ಆಪರೇಟರ್ ಕೆಲಸ ನೀಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಭೆಯಲ್ಲಿ ತಿಪಟೂರು ಉಪವಿಭಾಗಾಧಿಕಾರಿ ಸಪ್ತಶ್ರೀ, ತಹಶೀಲ್ದಾರ್ ಕುಂಞ ಅಹಮದ್ ಸೇರಿದಂತೆ ಅರಣ್ಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಪತ್ರಿಕೋದ್ಯಮ ಪದವಿ ಸ್ನಾತಕೋತ್ತರ ಪದವೀಧರರಿಂದ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2025-26ನೇ ಸಾಲಿಗೆ ಪರಿಶಿಷ್ಟ ಜಾತಿಯ ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿಗೆ ಸೇರಿದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನದಲ್ಲಿ ಪದವಿ,ಸ್ನಾತಕೋತ್ತರ ಪದವಿ ಹೊಂದಿರುವ ಇಬ್ಬರು ಅಭ್ಯರ್ಥಿಗಳಿಗೆ ತುಮಕೂರು ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಕಚೇರಿಯಲ್ಲಿ ಒಂದು ವರ್ಷದ ಅವಧಿಗೆ ಅಪ್ರೆಂಟಿಸ್ ತರಬೇತಿ ನೀಡಲು ಅರ್ಹರಿಂದ ಅರ್ಜಿ ಆಹ್ವಾನಿಸಿದೆ.

ಈ ತರಬೇತಿಯು 2026ನೇ ದಿನದರ್ಶಿ(ಕ್ಯಾಲೆಂಡರ್)ಯ ಜನವರಿ ಮಾಹೆಯಿಂದ ಪ್ರಾರಂಭಗೊಂಡು ಡಿಸೆಂಬರ್ 2026ಕ್ಕೆ ಕೊನೆಗೊಳ್ಳಲಿದೆ. ರಾಜ್ಯದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ,ಸ್ನಾತಕೋತ್ತರ ಪದವಿ ಪಡೆದ, ಕಂಪ್ಯೂಟರ್ ಜ್ಞಾನ ಇರುವ, ಕನ್ನಡ ಭಾಷೆ ಬಳಕೆಯಲ್ಲಿ ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಪರಿಶಿಷ್ಟ ಜಾತಿಯ ಇಬ್ಬರು ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಸಂದರ್ಶನದ ಮೂಲಕ ತರಬೇತಿಗೆ ಆಯ್ಕೆ ಮಾಡಿಕೊಳ್ಳಲಾಗುವುದು. ಅಭ್ಯರ್ಥಿಗಳ ವಯಸ್ಸು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು 35 ವರ್ಷ ಮೀರಿರಬಾರದು.

ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ "ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ" ಎಂದು ನಮೂದಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಅಭ್ಯರ್ಥಿಗಳು ಪದವಿ,ಸ್ನಾತಕೋತ್ತರ ಅಂತಿಮ ವರ್ಷದ ಪದವಿ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಆಯ್ಕೆಯಾದ ಪ್ರತಿ ಅಪ್ರೆಂಟಿಸ್‌ಗೆ ತರಬೇತಿ ಅವಧಿಯಲ್ಲಿ ಮಾಹೆಯಾನ 15ಸಾವಿರ ರೂ. ಗಳ ಶಿಷ್ಯವೇತನ ನೀಡಲಾಗುವುದು. ಈ ತರಬೇತಿಯು ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸುವಂತೆ ಒತ್ತಡ ತರುವಂತಿಲ್ಲ. ತರಬೇತಿ ಅವಧಿಯಲ್ಲಿ ಬೇರೆ ಉದ್ಯೋಗ ಮಾಡಲು ಅವಕಾಶವಿಲ್ಲ. ತರಬೇತಿ ಮಧ್ಯದಲ್ಲಿ ಬಿಟ್ಟುಹೋದರೆ ಅವಧಿಗೆ ಮುನ್ನ ದಾಖಲಾತಿಗಳನ್ನು ಹಿಂದಿರುಗಿಸಲಾಗುವುದಿಲ್ಲ. ಸರ್ಕಾರಿ/ಖಾಸಗಿ ಸಂಸ್ಥೆಯಲ್ಲಿ ಖಾಯಂ ಉದ್ಯೋಗ ಸಿಕ್ಕಿದಲ್ಲಿ ಷರತ್ತಿಗೊಳಪಟ್ಟು ಮೂಲ ದಾಖಲಾತಿಗಳನ್ನು ಹಿಂದಿರುಗಿಸಲಾಗುವುದು.

ಒಮ್ಮೆ ಫಲಾನುಭವಿಯಾದವರನ್ನು ಈ ತರಬೇತಿಯ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ. ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. ಮೇಲ್ಕಂಡ ಷರತ್ತುಗಳನ್ನು ಪಾಲಿಸುವುದಾಗಿ ಆಯ್ಕೆಯಾದ ಅಭ್ಯರ್ಥಿಗಳು 20ರೂ.ಗಳ ಛಾಪಾ ಕಾಗದದಲ್ಲಿ ಲಿಖಿತವಾಗಿ ಹೇಳಿಕೆ ನೀಡಬೇಕು. ಅರ್ಜಿಯೊಂದಿಗೆ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಪದವಿ/ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 2 ಭಾವಚಿತ್ರ ಹಾಗೂ ಆಧಾರ್ ಕಾರ್ಡ್, ವಿಳಾಸದ ದೃಢೀಕರಣ ದಾಖಲೆ ಸೇರಿದಂತೆ ಇನ್ನಿತರೆ ಪೂರಕ ದಾಖಲೆಗಳನ್ನು ದ್ವಿ-ಪ್ರತಿಯಲ್ಲಿ ಸಲ್ಲಿಸಲು ಡಿಸೆಂಬರ್ 26 ಕಡೆ ದಿನವಾಗಿರುತ್ತದೆ. ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿ ಮಾಹಿತಿಗಾಗಿ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ಗುಬ್ಬಿ ವೀರಣ್ಣ ಕಲಾಕ್ಷೇತ್ರದ ಪಕ್ಕ, ಬಾಳನಕಟ್ಟೆ, ತುಮಕೂರು ಇವರನ್ನು ಅಥವಾ ಮೊ.ಸಂ. 9449322102/9449950415ನ್ನು ಸಂಪರ್ಕಿಸಬೇಕೆಂದು ಹಿರಿಯ ಸಹಾಯಕ ನಿರ್ದೇಶಕ ಹಿಮಂತರಾಜು ಜಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ಪ್ರವಾಸೋದ್ಯಮ ಇಲಾಖೆ ವತಿಯಿಂದ ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸುವ ಸಲುವಾಗಿ 1 ತಿಂಗಳ ವಸತಿ ಸಹಿತ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ನಡೆಸಲು ಸಹಾಯಧನನೀಡಲಾಗುವುದು. ಅರ್ಜಿದಾರರು ಪ.ಪಂಗಡಕ್ಕೆ ಸೇರಿದವರಾಗಿದ್ದು, 20 ರಿಂದ 45 ವರ್ಷದೊಳಗಿನವರಾಗಿರಬೇಕು. ಅರ್ಜಿ ದಾರರು 10ನೇ ತರಗತಿಯಲ್ಲಿ ಉತ್ತೀರ್ಣರಾಗಿದ್ದು, ಲಘು ವಾಹನ ಚಾಲನಾ ಪರವಾನಗಿಯನ್ನು ಹೊಂದಿರಬೇಕು. ನಗರ ಪ್ರದೇಶದವರ ವಾರ್ಷಿಕ ಆದಾಯ 2 ಲಕ್ಷ ರೂ. ಹಾಗೂ ಗ್ರಾಮಾಂತರ ಪ್ರದೇಶದವರ ವಾರ್ಷಿಕ ಆದಾಯ 1.50ಲಕ್ಷ ರೂ.ಗಳನ್ನು ಮೀರಬಾರದು. ಯಾವುದೇ ಸರ್ಕಾರಿ ಇಲಾಖೆ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರಬಾರದು.

ನಿಗಧಿತ ಅರ್ಜಿ ನಮೂನೆಯನ್ನು ಜಿಲ್ಲಾ ಮಟ್ಟದ ಪ್ರವಾಸೋದ್ಯಮ ಕಚೇರಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ತಹಶೀಲ್ದಾರರಿಂದ ಪಡೆದುಕೊಂಡಿರುವ ಚಾಲ್ತಿಯಲ್ಲಿರುವ ಜಾತಿ,ಆದಾಯ ಪ್ರಮಾಣಪತ್ರ, ಖಾಯಂ ಲಘು ವಾಹನ ಚಾಲನಾ ಪರವಾನಗಿ, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಆಧಾರ್ ಕಾರ್ಡ್, ಯಾವುದೇ ಸರ್ಕಾರಿ ಇಲಾಖೆ,ನಿಗಮ,ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರದ ಬಗ್ಗೆ ಸ್ವಯಂ ಪ್ರಮಾಣೀಕರಿಸಿ 50ರೂ. ಬೆಲೆಯ ಛಾಪಾ ಕಾಗದದಲ್ಲಿ ನಮೂನೆ-3ರಲ್ಲಿ ಪ್ರಮಾಣಪತ್ರ ಲಗತ್ತಿಸಬೇಕು. ಅಗತ್ಯ ದಾಖಲೆಗಳನ್ನು ಸ್ವಯಂ ದೃಢೀಕರಿಸಿ ದ್ವಿಪ್ರತಿಯಲ್ಲಿ ಡಿಸೆಂಬರ್ 29ರೊಳಗಾಗಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ರೆಡ್‌ಕ್ರಾಸ್ ಭವನ, 1ನೇ ಮಹಡಿ, ಕೊಠಡಿ ಸಂಖ್ಯೆ: ಎಫ್ 232, ಅಶೋಕ ರಸ್ತೆ, ತುಮಕೂರು-572101 ಇವರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.ವಾ.ಸಂ. 0816-2006349ನ್ನು ಸಂಪರ್ಕಿಸಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕ ಸಂಜೀವ್ ಕುಮಾರ್ ತಿಳಿಸಿದ್ದಾರೆ.

# ಹಾಲು ಉತ್ಪಾದನೆ ಹೆಚ್ಚಿಸಲು ಕಾನ್ಕೆರೆ ಡೇರಿಗೆ 3.50 ಲಕ್ಷ ರೂ ತುಮುಲು ನಿರ್ದೇಶಕ ಬುಲ್ಲೇನಹಳ್ಳಿ ಶಿವಪ್ರಕಾಶ್

ಹುಳಿಯಾರು: 80 ಮನೆ ಇರುವ ಸಣ್ಣ ಗ್ರಾಮ ಕಾನ್ಕೆರೆ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ಕಡಿಮೆ ಹಾಲು ಉತ್ಪಾದಿಸುತ್ತಿದ್ದು ಇನ್ನು ಹೆಚ್ಚು ಹಾಲು ಉತ್ಪಾದಿಸಲಿ ಆರ್ಥಿಕ ಪ್ರಗತಿ ಸಾಧಿಸಲೆಂದು ಈ ಸಂಘಕ್ಕೆ ಸ್ಟೆಪ್ ಯೋಜನೆಯಡಿ 3.50 ಲಕ್ಷ ನೀಡಲಾಗಿದೆ ಎಂದು ತುಮುಲು ನಿರ್ದೇಶಕ ಬುಲ್ಲೇನಹಳ್ಳಿ ಶಿವಪ್ರಕಾಶ್ ತಿಳಿಸಿದರು.



ತುಮಕೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದಿಂದ ಸ್ಟಪ್ ಯೋಜನೆ ಅಡಿ ಸಂಘಕ್ಕೆ ಚೆಕ್ ವಿತರಿಸಿ ಅವರು ಮಾತನಾಡಿದರು.

ಕಾನ್ಕೆರೆ ಸಂಘಕ್ಕೆ ಉತ್ತಮವಾದ ಕಟ್ಟಡವನ್ನು ನಿರ್ಮಿಸಲು ಮುಂದಿನ ದಿನಗಳಲ್ಲಿ ಸಹಕಾರ ನೀಡುತ್ತೇವೆ ಎಂದರಲ್ಲದೆ ಹಸುಗಳಿಗೆ ಎಲ್ಲರೂ ತಪ್ಪದೆ ಇನ್ಸೂರೆನ್ಸ್ ಮಾಡಿಸಿ, ಉತ್ಪಾದಕರ ಮಕ್ಕಳಿಗೆ ಜಿಲ್ಲೆಯಲ್ಲಿ ಹಾಸ್ಟಲ್ ವ್ಯವಸ್ಥೆ ಇದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಕಿವಿ ಮಾತು ಹೇಳಿದರು. ಸ್ಟೆಪ್ ಯೋಜನೆಯ ಮುಖ್ಯಸ್ಥರಾದ ಮಧು ಮಾತನಾಡಿ ವಿಶೇಷವಾಗಿ ನೀಡಿರುವ 3.50 ಲಕ್ಷ ರೂಗಳನ್ನು ಬಳಸಿಕೊಂಡು ಇನ್ನು ಮುಂದೆ ಹೆಚ್ಚು ಹಾಲನ್ನು ಉತ್ಪಾದಿಸಿ ಸಂಘವನ್ನು ಉತ್ತಮಗೊಳಿಸಿ ಜಿಲ್ಲೆಗೆ ಅತಿ ಹೆಚ್ಚು ಹಾಲು ಉತ್ಪಾದಿಸಿ ಪ್ರಶಸ್ತಿ ತಿಳಿದುಕೊಳ್ಳಬೇಕೆಂದರಲ್ಲದೆ ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಮಲ್ಲಿಗೆರೆ ಮತ್ತು ಕಾನ್ಕೆರೆ ಮಹಿಳಾ ಸಂಘಗಳಿಗೆ ಮಾತ್ರ ಹಸು ತೆಗೆದುಕೊಳ್ಳಲು ಆಯ್ಕೆ ಮಾಡಿರುತ್ತದೆ ಎಂದು ತಿಳಿಸಿದರು.

ಸಂಘದ ಅಧ್ಯಕ್ಷರಾದ ಲಲಿತಮ್ಮ ಮಾತನಾಡಿ ನಮ್ಮ ಸಂಘಕ್ಕೆ 3.50 ಲಕ್ಷ ರೂ,ವನ್ನು ಕೊಟ್ಟು ಸಹಕರಿಸಿದ್ದಕ್ಕೆ ನಿರ್ದೇಶಕರನ್ನು ಮತ್ತು ಎಲ್ಲಾ ಸಿಬ್ಬಂದಿಯನ್ನು ಅಭಿನಂದಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯವರಾದ ತಮ್ಮಣ್ಣ, ಪರಮೇಶ್, ಸಂಘದ ಮೇಲ್ವಿಚಾರಕರಾದ ಸ್ವಾಮಿ, ಮೋಹನ್ ಮತ್ತು ಭವ್ಯ ಉಪಸ್ಥಿರಿದ್ದರು.

# ರುಡ್‌ಸೆಟ್ ಸಂಸ್ಥೆ : ಸಿ.ಸಿ. ಟಿವಿ ಅಳವಡಿಕೆ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ರುಡ್‌ಸೆಟ್ ಸಂಸ್ಥೆ ವತಿಯಿಂದ ಜನವರಿ 19 ರಿಂದ 13 ದಿನಗಳ ಉಚಿತ ಸಿ.ಸಿ. ಟಿವಿ ಅಳವಡಿಕೆ ಮತ್ತು ಸೇವಾ ತರಬೇತಿ ನೀಡಲು ಉದ್ದೇಶಿಸಿದ್ದು, ತರಬೇತಿ ಪಡೆಯಲಿಚ್ಛಿಸುವ ಆಸಕ್ತ ಗ್ರಾಮೀಣ ನಿರುದ್ಯೋಗಿ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಹೊಂದಿರಬೇಕು.

ತರಬೇತಿಯು ವಸತಿಯುತವಾಗಿದ್ದು, ತರಬೇತಿ ಅವಧಿಯಲ್ಲಿ ಉಚಿತ ಊಟದ ವ್ಯವಸ್ಥೆ ಕಲ್ಪಿಸಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9481506564, 9113880324ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂರ್ಯ ಪ್ರಗತಿ
ಪತ್ರಿಕೆಯನ್ನು
ಕೊಂಡು ಓದಿ
ಜಾಹೀರಾತಿಗಾಗಿ
ಸಂಪರ್ಕಿಸಿ
9901010109

## ಒಂದನೇ ಪುಟದಿಂದ

### ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದು ಮಹಾತ್ಮಗಾಂಧೀಜಿ

ವಿಕಸಿತ ಭಾರತ ವಿಬಿ ಜಿ ರಾಮ್ ಜಿ ಎಂದು ಉದ್ಯೋಗ ಖಾತ್ರಿಗೆ ಹೆಸರಿಡುವ ಮಸೂದೆಗೆ ರಾಷ್ಟ್ರಪತಿಗಳಿಂದ ಅಂಕಿತ ಹಾಕಿಸಿದೆ. ಇದು ಸರಿಯಲ್ಲ ಎಂದರು.

ದೇಶದ ಸಂವಿಧಾನಕ್ಕೆ ಬದ್ಧವಾಗಿರುವಂತಹ ಹೆಸರನ್ನು ಸೂಚಿಸದೆ ರಾಮನ ಹೆಸರನ್ನು ಮುನ್ನಲೆಗೆ ತಂದು ನರೇಗಾ ಯೋಜನೆಯಲ್ಲಿ ಮಹಾತ್ಮಗಾಂಧಿಯವರ ಹೆಸರನ್ನು ತೆಗೆದಿರುವ ಕ್ರಮವನ್ನು ಭಾರತ ಕಮ್ಯುನಿಸ್ಟ್ ಪಕ್ಷ ತೀವ್ರವಾಗಿ ವಿರೋಧಿಸುತ್ತದೆ ಎಂದು ಹೇಳಿದರು. ಕೇಂದ್ರ ಸರ್ಕಾರದ ಈ ಮಸೂದೆಯಲ್ಲಿ 8 ಅಪ್ಪಟ ಸುಳ್ಳುಗಳು ಇರುವುದನ್ನು ಎಲ್ಲರೂ ಗಮನಿಸಬೇಕಾಗಿದೆ. ಬೆಳೆ ನಾಟಿ ಮಾಡುವ ಸಂದರ್ಭದಲ್ಲಿ, ಬೆಳೆ ಕಟಾವು ಮಾಡುವ ಸಂದರ್ಭದಲ್ಲಿ ಕೂಲಿ ಕೊಡುವ ವಿಚಾರ, 120 ದಿನ ಕೆಲಸ ಜಾರಿಗೊಳಿಸುವ ಕ್ರಮ ನಾಚಿಕೆಗೇಡಿನ ವಿಚಾರ. ವಿಕಸಿತ ಭಾರತ ವಿಬಿ ಜಿ ರಾಮ್ ಜಿ ಹೆಸರಿಗೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದಾರೆ. ಇದನ್ನು ಗಮನಿಸಿದರೆ ರಾಷ್ಟ್ರಪತಿಗಳು ಕೇಂದ್ರ ಸರ್ಕಾರದ ಕೈಗೊಂಬೆಯಾಗಿದ್ದಾರೆಯೇ ಎಂಬ ಅನುಮಾನ ಮೂಡುತ್ತದೆ ಎಂದರು.

ಲೋಕಸಭೆಯಲ್ಲಿ ವಿಪಕ್ಷಗಳು ಈ ವಿಚಾರವನ್ನು ಖಂಡಿಸಿ ಸಭಾತ್ಯಾಗ ಮಾಡಿದರೂ ಸಹ ರಾಷ್ಟ್ರಪತಿಗಳು ಈ ಮಸೂದೆಗೆ ರಾಷ್ಟ್ರಪತಿಗಳು ಅಂಕಿತ ಹಾಕಿರುವ ಕ್ರಮವನ್ನು ತೀವ್ರವಾಗಿ ವಿರೋಧಿಸುತ್ತೇವೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಭಾರತ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಸಹಕಾರ್ಯದರ್ಶಿ ಗೋವಿಂದರಾಜು, ಖಜಾಂಚಿ ಅಶ್ವತ್ಥ್‌ನಾರಾಯಣ, ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯ ರಾಜೇಶ್, ಜಾಫರ್ ಷರೀಫ್, ಭೋಜರಾಜು, ಮಂಜುನಾಥ್, ವೆಂಕಟೇಶ್, ಎನ್.ಕೆ. ರಾಜಣ್ಣ, ಸುರೇಶ್ ಮತ್ತಿತರರು ಭಾಗವಹಿಸಿದ್ದರು.

### ಅರ್ಹ ಫಲಾನುಭವಿಗಳಿಗೆ ಶೀಘ್ರವೇ ಹೊಸ

ಪರಿಶೀಲನೆಯಲ್ಲಿ ಅತಿ ಹೆಚ್ಚು ಪಡಿತರ ಚೀಟಿ ಸಮಸ್ಯೆಗಳು ಕಂಡು ಬಂದ ಹಿನ್ನೆಲೆಯಲ್ಲಿ, ಜಿಲ್ಲೆಯ ಎಲ್ಲಾ ಹೋಬಳಿಗಳಲ್ಲಿ ಆಹಾರ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು. ಆಹಾರ ಅದಾಲತ್ ಮೂಲಕ ಪಡಿತರ ಚೀಟಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಆಲಿಸಿ, ಒಂದು ವಾರದೊಳಗೆ ಬಗೆಹರಿಸಿ ಫಲಾನುಭವಿಗಳಿಗೆ ಪಡಿತರ ತಲುಪಿಸುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಸುಮಾರು 7ಲಕ್ಷ ಪಡಿತರ ಚೀಟಿಗಳಿದ್ದು, ಇವುಗಳ ಮೂಲಕ ಸುಮಾರು 21 ಲಕ್ಷ ಜನರು ಪಡಿತರವನ್ನು ಪಡೆಯುತ್ತಿದ್ದಾರೆ. 70 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಎದುರಾಗುತ್ತಿರುವ ಬಯೋಮೆಟ್ರಿಕ್ ಸಮಸ್ಯೆಗಳನ್ನು ನಿವಾರಿಸಲು ಜಿಲ್ಲೆಯ 1,129 ನ್ಯಾಯಬೆಲೆ ಅಂಗಡಿಗಳಲ್ಲಿ ಐರಿಸ್(ಖಡ್ಡು) ಉಪಕರಣವನ್ನು ಅಳವಡಿಸಿ ಕಣ್ಣಿನ ಸ್ಕ್ಯಾನ್ ಮಾಡಿ ಪಡಿತರ ನೀಡಲು ಕ್ರಮ ಕೈಗೊಳ್ಳಲಾಗಿದೆ

ಬಯೋಮೆಟ್ರಿಕ್ ನೀಡಲು ಸಾಧ್ಯವಾಗದ ಶೇ. 2ರಷ್ಟು ಅರ್ಹ ಫಲಾನುಭವಿಗಳಿಗೆ ಪರಿಶೀಲನೆ ನಡೆಸಿ ವಿನಾಯಿತಿ ನೀಡಬಹುದಾಗಿದೆ. ಜಿಲ್ಲೆಯಲ್ಲಿ ಈಗಾಗಲೇ 4,000 ಜನರಿಗೆ ವಿನಾಯಿತಿ ನೀಡಲಾಗಿದ್ದು, ಇನ್ನೂ ಸುಮಾರು 10,000 ಅರ್ಹ ಫಲಾನುಭವಿಗಳಿಗೆ ವಿನಾಯಿತಿ ನೀಡಲು ಅವಕಾಶವಿದ್ದು, ಇದನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ ಚೌಡೇನಹಳ್ಳಿಯ ಗಂಗಮ್ಮ, ಹುಲಿಕೆರೆಯ ಕೆಂಪಮ್ಮ, ಹೊರಪೇಟೆಯ ವಂಸತಕುಮಾರಿ, ಕೆಬ್ಬೇಪಾಳ್ಯದ ಲಕ್ಷ್ಮಿದೇವಮ್ಮ, ನಾಯಕನ ಘಟ್ಟದ ರೇಣುಕಮ್ಮ ಹಾಗೂ ರಾಮಕೃಷ್ಣಯ್ಯ ಅವರಿಗೆ ಹೊಸ ಪಡಿತರ ಚೀಟಿ ವಿತರಿಸಲಾಯಿತು.

ನಂತರ ತುರುವೇಕೆರೆ ಪಟ್ಟಣದ ಮುನಿಯಮ್ಮ ಹಾಗೂ ಶಾಂತಮ್ಮ ಎಂಬುವರ ಮನೆಗೆ ತೆರಳಿ ಅನ್ನ ಸುವಿಧ ಯೋಜನೆಯಡಿ ಪಡಿತರಧಾನ್ಯ ವನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಲಕ್ಷ್ಮೀಕಾಂತ್, ತಿಪಟೂರು ಉಪವಿಭಾಗಾಧಿಕಾರಿ ಸಪ್ತಶ್ರೀ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಸೌಮ್ಯ, ತಹಶೀಲ್ದಾರ್ ಕುಂಞ ಅಹಮದ್ ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡಿದ್ದರು.

### ಪಠ್ಯೇತರ ಚಟುವಟಿಕೆಗಳು ಕೂಡ ಮಕ್ಕಳ ಜ್ಞಾನಾರ್ಜನೆಗೆ ಸಹಕಾರಿ

ಅವರು ಮಕ್ಕಳು ಪ್ರತಿ ಸ್ಪರ್ಧೆಯಲ್ಲಿ ಭಾಗವಹಿಸುವುದು ಬಹಳ ಮುಖ್ಯ. ಸ್ಪರ್ಧೆಗಳಲ್ಲಿ ಭಾಗವಹಿಸಿದ ಮಕ್ಕಳು ಸೋತರೂ ಕೂಡಾ ಮುಂದಿನ ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಲು ದಾರಿಯಾಗುತ್ತದೆ ಎಂದು ತಿಳಿಸಿ ಸ್ಪರ್ಧೆಯಲ್ಲಿ ಭಾಗವಹಿಸಿದ ಮಕ್ಕಳಿಗೆ ಶುಭ ಕೋರಿದರು.

ಮಕ್ಕಳಿಗೆ ಶಾಲೆಯ ಶಿಕ್ಷಣದ ಜೊತೆಗೆ ಇತರೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿಕೊಡುವುದು ಈ ಕಾರ್ಯಕ್ರಮದಮುಖ್ಯಉದ್ದೇಶವಾಗಿದೆ.ಪಠ್ಯೇತರಚಟುವಟಿಕೆಗಳಿಂದ ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಗುರುತಿಸಲು ಮತ್ತು ಪ್ರೋತ್ಸಾಹಿಸಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ತುಮಕೂರು ಗ್ರಾಮಾಂತರದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ತಾಲ್ಲೂಕು ಬಾಲಭವನ ಸಮಿತಿ ಕಾರ್ಯದರ್ಶಿ ಶಶಿಧರ್ ಮಾತನಾಡಿ ಬಾಲ್ಯದಿಂದಲೇ ಮಕ್ಕಳಿಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಗಳಲ್ಲಿ ತೊಡಗಿಸಿಕೊಳ್ಳಲು ಪ್ರೇರೇಪಿಸಬೇಕು. ಓದು ಮುಖ್ಯವಾದರೂ ಅದರೊಂದಿಗೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮಕ್ಕಳು ಭಾಗವಹಿಸುವುದು ಬಹಳ ಮುಖ್ಯ ಎಂದು ತಿಳಿಸಿದರು.

ಓಟದ ಸ್ಪರ್ಧೆ ಮತ್ತು ಆಶುಭಾಷಣ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ಮಕ್ಕಳಿಗೆ ಬಹುಮಾನ, ಪ್ರಮಾಣ ಪತ್ರ ಹಾಗೂ ಪ್ರಶಂಸನಾ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ತುಮಕೂರು ನಗರದ ಸಿ.ಆರ್.ಪಿ. ಚೇತನ ಮತ್ತು ಸುರೇಶ್, ಆರೋಗ್ಯ ಇಲಾಖೆಯ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಜಯಣ್ಣ, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರು, ಮಕ್ಕಳು ಹಾಗೂ ಜಿಲ್ಲಾ ಬಾಲಭವನ ಸಮಿತಿಯ ಕಾರ್ಯಕ್ರಮ ಸಂಯೋಜಕರು ಮತ್ತು ಕಚೇರಿ ಸಹಾಯಕರು ಉಪಸ್ಥಿತರಿದ್ದರು.

## ಕಾರ್ಯ ಒತ್ತಡ ನಡುವೆ ಖಾಸಗಿ ಬದುಕಿಗೂ ಆದ್ಯತೆ ನೀಡಿಯಿ:ಮುರಳೀಧರ ಹಾಲಪ್ಪ

# ಸಂಪಾದಕರ ಸಂಘದಲ್ಲಿ ದತ್ತಿನಿಧಿ ಸ್ಥಾಪನೆಗೆ ಭರವಸೆ

ತುಮಕೂರು: ಸಾಮಾಜಿಕ ಕಳಕಳಿ ಹೊಂದಿರುದ ದಿನಪತ್ರಿಕೆಗಳನ್ನು ರೂಪಿಸುವ ಹೊಣೆ ಹೊತ್ತಿರುವ ಸಂಪಾದಕರು ದಿನನಿತ್ಯ ಬಿಡುವಿಲ್ಲದೆ ಕೆಲಸ ಮಾಡಬೇಕಾಗುತ್ತದೆ. ಈ ಕಾರ್ಯಭಾರದಲ್ಲಿ ಅವರು ತಮ್ಮ ಖಾಸಗಿ ಬದುಕನ್ನೂ ಕಳೆದುಕೊಳ್ಳುವಷ್ಟು ಒತ್ತಡ ಬರಬಹುದು. ಎಷ್ಟೇ ಕಾರ್ಯ ಒತ್ತಡದ ನಡುವೆಯೂ ತಮ್ಮ ಕುಟುಂಬಕ್ಕಾಗಿ ಸಮಯ ಮೀಸಲಿಟ್ಟು ಅವರೊಂದಿಗೆ ಬೆರೆತು ಕುಟುಂಬದ ಕಲ್ಯಾಣಕ್ಕೆ ಪ್ರಯತ್ನಿಸಬೇಕು ಎಂದು ಪ್ರದೇಶ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಮುರಳಿಧರ ಹಾಲಪ್ಪ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪತ್ರಿಕಾ ದಿನಾಚರಣೆ, ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ರಾಜ್ಯ ಸಮಿತಿ ಕಾರ್ಯಕಾರಿಣಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ತುಮಕೂರು ವಿಶ್ವವಿದ್ಯಾಲಯದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ತಮ್ಮ ಹಾಲಪ್ಪ ಪ್ರತಿಷ್ಠಾನದಡಿ ಚಿನ್ನದ ಪದಕ ನೀಡಲಾಗುತ್ತಿದೆ. ಇದೇ ರೀತಿ ಪತ್ರಕರ್ತರ ಕಲ್ಯಾಣ ಹಾಗೂ ಪ್ರೋತ್ಸಾಹಕ್ಕಾಗಿ ಸಾಧ್ಯವಾದಷ್ಟು ದತ್ತಿ ಹಣ ಮೀಸಲಿಡುವ ಮೂಲಕ ಅವರ ವೃತ್ತಿ ಬದುಕಿಗೆ ಶಕ್ತಿ ತುಂಬುವ ಪ್ರಯತ್ನ ಮಾಡುವುದಾಗಿ ಹೇಳಿದರು.

ಕೈಗಾರಿಕೋದ್ಯಮಿ, ಟೂಡಾ ಮಾಜಿ ಅಧ್ಯಕ್ಷರಾದ ಹೆಚ್.ಜಿ.ಚಂದ್ರಶೇಖರ್ ಮಾತನಾಡಿ, ಪತ್ರಿಕೋದ್ಯಮ ಸಾಮಾಜಿಕ ಕಳಕಳಿಯುಳ್ಳ, ಬದ್ಧತೆಯ ವೃತ್ತಿಯಾಗಿದೆ. ಸಾಮಾಜಿಕ ಸೇವಾ ಕ್ಷೇತ್ರವಾಗಿರುವ ಪತ್ರಿಕಾ ಕ್ಷೇತ್ರದಲ್ಲಿ ತೊಡಗಿರುವ ಪತ್ರಕರ್ತರು ವೃತ್ತಿ ಬದ್ಧತೆ



ಸಾಧಿಸಬೇಕು ಎಂದು ಹೇಳಿದ ಅವರು, ಸಂಪಾದಕರ ಸಂಘದ ದತ್ತಿ ಪ್ರಶಸ್ತಿಗೆ ತಾವು ಒಂದು ಲಕ್ಷ ರೂ. ದೇಣಿಗೆ ನೀಡುವುದಾಗಿ ಪ್ರಕಟಿಸಿದರು.

ಸಂಘದ ರಾಜ್ಯ ಉಪಾಧ್ಯಕ್ಷ ರಾಮಕೃಷ್ಣ ಮಾಮರ ಮಾತನಾಡಿ, ಸಣ್ಣ ಪತ್ರಿಕೆಗಳು ಗ್ರಾಮೀಣ ಪ್ರದೇಶದ ಮೂಲೆಮೂಲೆಗಳಲ್ಲಿನ ಸಮಸ್ಯೆಗಳನ್ನು ಎತ್ತಿ ಹಿಡಿದು ಸಮಾಜದ ಮುಂದೆ ತರುತ್ತವೆ. ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಸಣ್ಣ ಪತ್ರಿಕೆಗಳನ್ನು ನಡೆಸುವುದು ಕಷ್ಟವಾಗಿದೆ. ಇಂತಹ ಪತ್ರಿಕೆಗಳಿಗೆ ಸರ್ಕಾರ ಹೆಚ್ಚಿನ ಪ್ರಮಾಣದ ಜಾಹೀರಾತು ನೀಡಿ ಸಣ್ಣ ಪತ್ರಿಕೆಗಳಿಗೆ ಆರ್ಥಿಕ ಶಕ್ತಿ ತುಂಬಬೇಕು ಎಂದು ಒತ್ತಾಯಿಸಿದರು.

ಸಂಘದ ಜಿಲ್ಲಾಧ್ಯಕ್ಷ ಜಿ.ಕರುಣಾಕರ್ ಮಾತನಾಡಿ, ವಿಜಯಮುಗಿಲು ಪತ್ರಿಕೆ ಸಹ ಸಂಪಾದಕರಾದ ಹೆಚ್. ಹನುಮಂತಯ್ಯ ಅವರು ಸಂಘದಲ್ಲಿ ದತ್ತಿಯಾಗಿ ಇಟ್ಟಿರುವ ಪ್ರಶಸ್ತಿ ಹಾಗೂ ನಗದು ಪ್ರೋತ್ಸಾಹ ನೀಡಿದೆ ಎಂದ ಅವರು, ಜೊತೆಗೆ ಸಣ್ಣ ಪತ್ರಿಕೆಗಳ ಸಂಪಾದಕರು ಸಂಘಟಿತರಾಗಿ ಸಮಾಜದ ಅಂಕುಡೊಂಕು ತಿದ್ದಲು, ಎದುರಾಗುವ ಸವಾಲುಗಳನ್ನು ಬಗೆಹರಿಸಿಕೊಳ್ಳಲು ಸನ್ನದ್ಧರಾಗಬೇಕು. ಪತ್ರಕರ್ತರಿಗೆ ಮೂಲಭೂತ ಸೌಲಭ್ಯ, ಹಕ್ಕು ದೊರಕಿಸಲು ಪ್ರಯತ್ನಿಸಬೇಕು ಎಂದರು.

ವಿಜಯ ಮುಗಿಲು ಪತ್ರಿಕೆ ಸಹ ಸಂಪಾದಕ ಹೆಚ್. ಹನುಮಂತಯ್ಯ ಮಾತನಾಡಿ ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ಮಾಧ್ಯಮಕ್ಕೆ ವಿಶೇಷ ಮಾನ್ಯತೆ ಇದ್ದು, ಅದರ ಮಹತ್ವ ಅರಿತು ಪತ್ರಿಕೆಗಳು ಜನಸಾಮಾನ್ಯರ ಧ್ವನಿಯಾಗಿ ಕೆಲಸ ಮಾಡುತ್ತಿವೆ. ಇಂದು ಹಣ, ಜಾತಿ ಹಾಗೂ ಪತ್ರಿಕೆಗಳ ಗುಣಮಟ್ಟದ ಆಧಾರದಲ್ಲಿ ಪತ್ರಕರ್ತರ ಮೌಲ್ಯಗಳನ್ನು ಅಳೆಯುತ್ತಿರುವುದು ವಿಷಾದನೀಯ ಎಂದು ಹೇಳಿದರು.

ಮಾಜಿ ಶಾಸಕ, ಅಮೃತವಾಣಿ ಸಂಪಾದಕ ಗಂಗಹನುಮಯ್ಯ ಮಾತನಾಡಿ, ಪತ್ರಿಕೋದ್ಯಮಕ್ಕೆ ತನ್ನದೇ ಆದ ಶಕ್ತಿ ಇದೆ. ಆ ಶಕ್ತಿಯನ್ನು ಸಮಾಜದ ಏಳಿಗೆಗೆ ಬಳಸಬೇಕು ಎಂದು ತಿಳಿಸಿ ಜಿಲ್ಲೆಯ ಪತ್ರಿಕೆಗಳ ಬೆಳವಣಿಗೆಗೆ ಬಗ್ಗೆ ನೆನಪು ಮಾಡಿಕೊಂಡರು.

ಪ್ರಜಾಪರ್ವ ಪತ್ರಿಕೆ ಸಂಪಾದಕ ಕೊಪ್ಪಳದ ಎಂ.ಜಿ ಶ್ರೀನಿವಾಸ್ ಅವರಿಗೆ ಈ ವೇಳೆ 'ಸಂಪಾದಕ ರತ್ನ' ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಂತರ ಅವರು ಮಾತನಾಡಿ, ಸಣ್ಣ ಪತ್ರಿಕೆಗಳು ಕೀಳರಿಮೆ ಬಿಟ್ಟು ಸಾಮಾಜಿಕ ಕಾಳಜಿಯ ಸುದ್ದಿಗಳನ್ನು ಪ್ರಕಟಿಸಿ ಸಮಾಜ ಪರಿವರ್ತನೆಗೆ ನೆರವಾಗಲಿ ಎಂದರು.ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಯೋಗೀಶ್, ಪ್ರಧಾನ ಕಾರ್ಯದರ್ಶಿ ಟಿ.ಇ.ರಘುರಾಮ್, ನಿರ್ದೇಶಕ ಜಯಣ್ಣ ಬೆಳಗೆರೆ ಮಾತನಾಡಿದರು.

ಸುದಿನ ಪತ್ರಿಕೆ ಸ್ಥಾನಿಕ ಸಂಪಾದಕ ಹೆಚ್.ಎಸ್.ಹರೀಶ್, ಈ ಮುಂಜಾನೆ ಸಂಪಾದಕ ಮೊಹಮದ್ ಯೂನಿಸ್, ಸೂರ್ಯಾಸ್ಥ ಸಂಜೆ ಪತ್ರಿಕೆ ಸಂಪಾದಕ ವಿಜಯಕುಮಾರ್ ಪಾಟೀಲ್, ಸತ್ಯದರ್ಶಿನಿ ಪತ್ರಿಕೆ ಸಹ ಸಂಪಾದಕ ಹೆಚ್.ಕೆ.ರವೀಂದ್ರನಾಥ್ ಹೊನ್ನೂರು, ದತ್ತಿ ಪ್ರಶಸ್ತಿ ದಾನಿ ಹೆಚ್.ಹನುಮಂತಯ್ಯ, ರಾಜ್ಯ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಅನು ಶಾಂತರಾಜು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಆರ್ ಲಕ್ಷ್ಮೀನಾರಾಯಣ ಶೆಟ್ಟಿ, ಜಯಣ್ಣ ಬೆಳಗೆರೆ, ಸಿ.ಟಿ.ಎಸ್. ಗೋವಿಂದಪ್ಪ, ನಾಗರಾಜು, ನರಸಿಂಹಯ್ಯ, ಪತ್ರಿಕಾ ವಿತರಕ ನಾಗರಾಜು, ಗೂಳೂರು ಸುರೇಶ್, ಅಕ್ಷಯ್ ಚೌದರಿ ಸೇರಿದಂತೆ ಹಲವರನ್ನು ಸನ್ಮಾನಿಸಿ ಗೌರವಿಸಲಾಯಿತು. ಸಂಘದ ಜಿಲ್ಲಾ ಉಪಾಧ್ಯಕ್ಷ ಪಿ.ಎಸ್.ಮಲ್ಲಿಕಾರ್ಜುನ ಸ್ವಾಮಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಎಸ್.ಕೃಷ್ಣ ಮೂರ್ತಿ, ರಾಜ್ಯ ಜಂಟಿ ಕಾರ್ಯದರ್ಶಿ ಸಿ.ರಂಗನಾಥ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ, ಮಂಜುನಾಥ ಗೌಡ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಬಸವರಾಜು, ಅಭಿಷೇಕ್, ಅಂಜಲಿ ಸೇರಿದಂತೆ ಜಿಲ್ಲೆ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳ ಹಲವಾರು ಪತ್ರಿಕಾ ಸಂಪಾದಕರು ಹಾಗೂ ವರದಿಗಾರರು ಉಪಸ್ಥಿತರಿದ್ದರು.

## ರೂಪಶ್ರೀ ಸಿ.ಆರ್‌ಗೆ ಡಾಕ್ಟರೇಟ್ ಪದವಿ

ತುಮಕೂರು: ನಗರದ ಶ್ರೀ ಸಿದ್ದಾರ್ಥ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮೆಕಾನಿಕಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿರುವ ರೂಪಶ್ರೀ ಸಿ.ಆರ್ ಅವರಿಗೆ ಬೆಂಗಳೂರು ವಿಶ್ವವಿದ್ಯಾ ಲಯದಿಂದ ಪಿ.ಎಚ್.ಡಿ ಪದವಿ ಸಂದಿದೆ.

ರೂಪಶ್ರೀ ಸಿ.ಆರ್ ಅವರು ವಿಶ್ವೇಶ್ವರಯ್ಯ ಎಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದ ಮೆಕಾನಿಕಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಪ್ರಾಧ್ಯಾಪಕರಾಗಿರುವ ಪ್ರೊ. ಶಿವರುದ್ರಯ್ಯ ಅವರ ಮಾರ್ಗದರ್ಶನದಲ್ಲಿ 'ವಿಭಿನ್ನ ಪರಿಸರ ಪರಿಸ್ಥಿತಿಗಳಲ್ಲಿ ಅಡಿಕೆ ಹೊಟ್ಟು ನಾರಿನ ಗುಣಲಕ್ಷಣಗಳು" ವಿಷಯ ಕುರಿತು ಮಂಡಿಸಿದ ಸಂಶೋಧನಾ ಪ್ರಬಂಧಕ್ಕೆ ಪಿ.ಎಚ್.ಡಿ ಪದವಿ ಲಭಿಸಿದೆ.

ರೂಪಶ್ರೀ ಸಿ.ಆರ್ ಅವರು ಶ್ರೀ ಸಿದ್ಧಾರ್ಥ ಇಂಜಿನಿಯರಿಂಗ್ ಸೇರಿದಂತೆ ರಾಜ್ಯದ ಇತರೆ ಕಾಲೇಜಿನಲ್ಲಿ ಕಳೆದ 12 ವರ್ಷಗಳಿಂದ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿದ್ದಾರೆ. ಅಂತಾರಾಷ್ಟೀಯ ಮಟ್ಟದ ವಿಚಾರ ಸಂಕಿರಣಗಳು ಸೇರಿದಂತೆ ಹಲವು ವಿಚಾರ ಸಂಕಿರಣಗಳಲ್ಲಿ



ಭಾಗವಹಸಿ, ಸಂಶೋಧನಾ ಪ್ರಬಂಧಗಳನ್ನು ಮಂಡಿಸಿದ್ದಾರೆ.

ಅಭಿನಂದನೆ: ಸಾಹೇ ವಿವಿ ಕುಲಪತಿ ಡಾ. ಲಿಂಗೇಗೌಡ, ಕುಲಸಚಿವ ಡಾ.ಅಶೋಕ ಮೆಹ್ತಾ, ಕುಲಾಧಿಪತಿಗಳ ಸಲಹೆಗಾರರಾದ ಡಾ. ವಿವೇಕ್ ವೀರಯ್ಯ, ಶ್ರೀ ಸಿದ್ದಾರ್ಥ ತಾಂತ್ರಿಕ ಮಹಾ ವಿದ್ಯಾಲಯದ ಪ್ರಾಂಶುಪಾಲರಾದ್ ಸೇರಿದಂತೆ ವಿಭಾಗದ ಪ್ರಾಧ್ಯಾಪಕರು ಸಂಶೋಧಕಿ ರೂಪಶ್ರೀ ಸಿ. ಆರ್. ಅವರನ್ನು ಅಭಿನಂದಿಸಿದ್ದಾರೆ.

## ಮಳೆ ನೀರನ್ನು ಚರಂಡಿಗೆ ಬಿಡಲು ಮನವಿ

ತುಮಕೂರು: ಪಾಲಿಕೆ ವ್ಯಾಪ್ತಿಯ ಲ್ಲಿರುವ ಮಾಲೀಕರು, ನಿವಾಸಿಗಳು ತಮ್ಮ ಮನೆ, ವಾಣಿಜ್ಯ ಕಟ್ಟಡ, ಶೌಚಾಲಯ, ಅಡುಗೆ ಮನೆಯಿಂದ ಬರುವ ಕಲುಷಿತ ನೀರನ್ನು ರಾಜಗಾಲುವೆಗೆ ನೇರವಾಗಿ ಬಿಡಬಾರದೆಂದು ಪಾಲಿಕೆ ಆಯುಕ್ತ ಯೋಗಾನಂದ ಮನವಿ ಮಾಡಿದ್ದಾರೆ.

ರಾಜಗಾಲುವೆಗಳು ಮಳೆ ನೀರನ್ನು ಮಾತ್ರ ಒಯ್ಯಲು ಸೀಮಿತ ಗೊಂಡಿದ್ದು, ಶೌಚಾಲಯ ಹಾಗೂ ಅಡುಗೆ ಮನೆಯಿಂದ ಬರುವ ಕಲುಷಿತ ನೀರನ್ನು ಒಳಚರಂಡಿ ಕೊಳವೆ ಮೂಲಕ ಬಿಡದೆ ರಾಜಗಾಲುವೆಗೆ ಹರಿಸಿದರೆ ಕಲುಷಿತ ನೀರು ಕೆರೆಗಳಿಗೆ ಸೇರಿ ಜಲಮಾಲಿನ್ಯ ಉಂಟಾಗುವ ಸಾಧ್ಯತೆಯಿರುತ್ತದೆ. ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಇಂತಹ ಸಮಸ್ಯೆಗಳನ್ನು ಬಗೆಹರಿಸಲು ಪಾಲಿಕೆಯ ಒಳಚರಂಡಿ ನಿರ್ವಹಣಾ ನೌಕರರು ವ್ಯರ್ಥ ಸಮಯ ವ್ಯಯಿಸುತ್ತಿದ್ದು, ಪಾಲಿಕೆಗೆ ಅನಾವಶ್ಯಕ ಆರ್ಥಿಕ ಹೊರೆ ಉಂಟಾಗುತ್ತಿದೆ.

ಕಟ್ಟಡಗಳ ಮಾಲೀಕರು ,ನಿವಾಸಿಗಳು ತಮ್ಮ ಮನೆ, ವಾಣಿಜ್ಯ ಕಟ್ಟಡ, ಶೌಚಾಲಯ, ಅಡುಗೆ ಮನೆಯಿಂದ ಬರುವ ಕಲುಷಿತ ನೀರನ್ನು ರಾಜಗಾಲುವೆಗೆ ಸಂಪರ್ಕಿಸುವುದನ್ನು 15 ದಿನಗಳೊಳಗಾಗಿ ಕಡಿತಗೊಳಿಸಿ ಸೂಚಿಸಿದ್ದಾರೆ.

# ಅಲೆಮಾರಿ ಹಂದಿ ಜೋಗರಿಗೆ ಮೂಲಭೂತ ಸೌಲಭ್ಯ ಕಲ್ಪಿಸಿ: ಜ.10 ರಿಂದ ಸ್ಥಳದಲ್ಲೇ ಅನಿಶಿಷ್ಟ ಅವಧಿ ಹೋರಾಟ : ಮುಖಂಡ ಸಂದೇಶ್

ತುಮಕೂರು: ಜಿಲ್ಲೆಯ ನಿರಾಶ್ರಿತರು, ಬಡವರು ನಿರ್ಗತಿಕರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ವಸತಿ ನಿವೇಶನದ ಜಾಗಗಳನ್ನು ಗುರುತಿಸಿದ್ದು ಅಲೆಮಾರಿ, ಅರೆ ಅಲೆಮಾರಿ ಅಕ್ಕಿ ಪಿಕ್ಕಿ ಹಂದಿ ಜೋಗಿ ಸಮುದಾಯಗಳಿಗೆ ನಿವೇಶನ ಕಲ್ಪಿಸಲು ತುಮಕೂರು ಹೊರವಲಯದ ಕೇಂದ್ರೀಯ ವಿದ್ಯಾಲಯದ ಬಳಿ ಅಮಲಾಪುರದ ಸರ್ವೆ ನಂ. 31 ರಲ್ಲಿ ಈಗಾಗಲೇ ಒಂದು ಎಕ್ಕರೆ ಜಮೀನು ನೀಡಿದ್ದು ಆದರೆ ಇಲ್ಲಿಗೆ ಮೂಲಭೂತ ಸೌಕರ್ಯ ಕಲ್ಪಿಸುವಲ್ಲಿ ಜಿಲ್ಲಾ ಆಡಳಿತದ ಅಧಿಕಾರಿಗಳು ವಿಫಲವಾಗಿದ್ದು ಕೂಡಲೇ ಮೂಲಭೂತ ಸೌಕರ್ಯ ಕಲ್ಪಿಸಿ ಹಕ್ಕುಪತ್ರ ನೀಡದೆ ಹೋದರೆ ಜನವರಿ 10 ರಿಂದ ಇಲ್ಲಿ ಅನಿರ್ದಿಷ್ಟ ಅವಧಿ ಹೋರಾಟ ನಡೆಸಲಾಗುವುದು ಎಂದು ಅಂಬೇಡ್ಕರ್ ಸೇವಾ ಸಮಿತಿಯ ರಾಜ್ಯಾಧ್ಯಕ್ಷ ಕೆ.ಎಮ್.ಸಂದೇಶ್ ಅವರು ತಿಳಿಸಿದರು.

ತುಮಕೂರು ನಗರ ಹೊರವಲಯದ ಅಮಲಾಪುರ ಕೇಂದ್ರೀಯ ವಿದ್ಯಾಲಯದ ಬಳಿ ಇರುವ ಹಂದಿ ಜ್ಯೋಗಿಗಳ ವಾಸಸ್ಥಾನಕ್ಕೆ ಭೇಟಿ ಸುದ್ದಿಗಾರರ ಬಳಿ ಮಾತನಾಡಿದರು ತುಮಕೂರು ಜಿಲ್ಲೆಯ ಸುಮಾರು 50ಕ್ಕೂ ಹೆಚ್ಚು ನಿರ್ಗತಿಕರು ಅಲೆಮಾರಿಗಳಿಗೆ ನಿವೇಶನ ಕಲ್ಪಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಒಂದು ಎಕ್ಕರೆ ಜಮೀನು ಮಂಜೂರು ಮಾಡಿದ್ದು ಇದನ್ನು ಅಭಿವೃದ್ಧಿಗೊಳಿಸಲು ಸಮಾಜ ಕಲ್ಯಾಣ ಇಲಾಖೆಯ ಸುಬರ್ದಿಗೆ ನೀಡಿದ್ದರು ಆದರೆ ತುಮಕೂರು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಜಮೀನು ಅಭಿವೃದ್ಧಿಗೊಳಿಸಲು ಇಲಾಖೆ ಯಲ್ಲಿ ಹಣವಿಲ್ಲ ಅನುದಾನ ಬಿಡುಗಡೆಯಾದ ನಂತರ ಅಭಿವೃದ್ಧಿಗೊಳಿಸಲಾಗುವುದು ಎಂಬ ಉಡಾಫೆ ಉತ್ತರವನ್ನು ನೀಡುತ್ತಿದ್ದಾರೆ ಇಲ್ಲಿನ ಅಧಿಕಾರಿಗಳು ಲಂಚ ದ ಆಸೆಗೆ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ರಾಜ್ಯದಲ್ಲಿ ದಲಿತರ ರಕ್ಷಣೆಗಾಗಿ ಅನೇಕ ಕಾನೂನುಗಳಿವೆ ಅಂಬೇಡ್ಕರ್ ಅವರ ಆಶಯದಂತೆ ದಲಿತರ ರಕ್ಷಣೆಗಾಗಿ ಸಮಾಜ ಕಲ್ಯಾಣ ಇಲಾಖೆ ಕೆಲಸ ಮಾಡಬೇಕಾಗುತ್ತದೆ ಈ ನಿಟ್ಟಿನಲ್ಲಿ ಅಧಿಕಾರಿಗಳು ಅದನ್ನ ಮರೆತು ಉಡಾಫೆ ಮಾತುಗಳನ್ನು ಆಡುತ್ತಿದ್ದಾರೆ ಇದನ್ನ ಖಂಡಿಸಿ ಜನವರಿ 10 ರಿಂದ ಇಲ್ಲಿನ ನಿವಾಸಿಗಳಿಗೆ ಹಕ್ಕುಪತ್ರ ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸುವ ವರೆಗೂ



ಅನಿರ್ದಿಷ್ಟವಾಗಿ ಹೋರಾಟ ವನ್ನು ನಡೆಸಲಾಗುವುದು ಎಂದು ಕೆ.ಎಂ. ಸಂದೇಶ್ ಅವರು ಎಚ್ಚರಿಕೆ ನೀಡಿದರು.

ಅಲೆಮಾರಿ ಹಂದಿ ಜೋಗಿ ಸಮುದಾಯದ ಮುಖಂಡ ನಾಗರಾಜ್ ಅವರು ಮಾತನಾಡಿ ಸುಮಾರು ವರ್ಷಗಳಿಂದಲೂ ನಾವು ಬೀದಿಯಲ್ಲಿ ಬದುಕುತ್ತಿದ್ದೇವೆ ಇದೀಗ ಗುಡ್ಡ ಪ್ರದೇಶದಲ್ಲಿ ವಾಸಿಸುತ್ತಿದ್ದು ಚಿರತೆ, ಹಾವು ಹಾಗೂ ಸೇರಿದಂತೆ ಕಾಡುಪ್ರಾಣಿಗಳ ಭಯದಲ್ಲಿ ಬದುಕುತ್ತಿದ್ದೇವೆ ಇಲ್ಲಿನ ಹೆಣ್ಣು ಮಕ್ಕಳು ಹೊರ ಹೋಗಲು ಭಯಪಡುತ್ತಿದ್ದಾರೆ ಅನೇಕ ಹೋರಾಟಗಳ ನಂತರ ನಮಗೆ ನಿವೇಶನ ನೀಡಲು ಒಂದು ಎಕ್ಕರೆ ಜಾಗವನ್ನು ಗುರುತಿಸಿದ್ದು ಇದನ್ನು ಅಭಿವೃದ್ಧಿಪಡಿಸಲು ಅಧಿಕಾರಿಗಳು ಮೀನ ಮೇಷ ಎಣಿಸುತ್ತಿದ್ದಾರೆ ಇದರಿಂದ ನಮಗೆ ತುಂಬಾ ಸಮಸ್ಯೆ ಉಂಟಾಗಿದೆ ಹಾಗಾಗಿ ಅಂಬೇಡ್ಕರ್ ಸೇವಾ ಸಮಿತಿಯ ರಾಜ್ಯಾಧ್ಯಕ್ಷರಾದ ಸಂದೇಶ್ ಅವರನ್ನು ಭೇಟಿ ಮಾಡಿದಾಗ ಅವರು ಇಲ್ಲಿಗೆ ಬಂದು ಹೋರಾಟ ಮಾಡಿ ಹಕ್ಕು ಪತ್ರ ಕೊಡಿಸುವುದಾಗಿ ಭರವಸೆ ನೀಡಿದ್ದಾರೆ ಈಗಲಾದರೂ ಅಧಿಕಾರಿಗಳು ನಮಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಮನವಿ ಮಾಡಿದರು.

# ಜ್ಞಾನಸಿರಿ ಕ್ಯಾಂಪಸ್‌ನಲ್ಲಿ ಬಯಲುರಂಗಮಂದಿರ: ಕುಲಪತಿ

ತುಮಕೂರು: ಬಿದರಕಟ್ಟೆಯಲ್ಲಿರುವ ತುಮಕೂರು ವಿಶ್ವವಿದ್ಯಾನಿಲಯದ ನೂತನ ಜ್ಞಾನಸಿರಿ ಕ್ಯಾಂಪಸ್‌ನಲ್ಲಿ ಬಯಲು ರಂಗಮಂದಿರ ಸ್ಥಾಪಿಸುವ ಯೋಜನೆಯಿದೆ ಎಂದರು ಕುಲಪತಿ ಪ್ರೊ. ಎಂ.ವೆಂಕಟೇಶ್ವರಲು ತಿಳಿಸಿದರು. ತುಮಕೂರು ವಿವಿಯಲ್ಲಿಯೋಗ ಅಧ್ಯಯನ ಮತ್ತು ಸಂಶೋಧನ ವಿಭಾಗವು ಹಮ್ಮಿಕೊಂಡಿದ್ದ'ವಿಶ್ವಧ್ಯಾನ ದಿನ'ದಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸ್ತಾವಿತ ರಂಗಮಂದಿರದಲ್ಲಿ ಒಂದುಸಾವಿರಪ್ರೇಕ್ಷಕರುಕುಳಿತುಕೊಳ್ಳುವ ಅವಕಾಶ ಮಾಡಿಕೊಡಲಾಗುವುದು ಎಂದರು.ವಿಶ್ವವಿದ್ಯಾನಿಲಯ ಜ್ಞಾನದಾಸೋಹ, ಆಶ್ರಯ ದಾಸೋಹ, ಅನ್ನದಾಸೋಹ, ಯೋಗದಾಸೋಹ ನೀಡುತ್ತಿದೆ.ಮುಂದಿನ ದಿನಗಳಲ್ಲಿ ಎಲ್ಲಾರೀತಿಯ ದಾಸೋಹಗಳ ಸ್ಥಾನವಾಗಬೇಕಿದೆ.ವಿಶ್ವವಿದ್ಯಾನಿಲಯ ಜ್ಞಾನದದೇಗುಲವಾಗಬೇಕು ಎಂದರು.ಹಿರಿಯ ಯೋಗಗುರುಜಿ. ವಿ. ವಿ. ಶಾಸ್ತ್ರಿಯವರು ಮಾತನಾಡಿ, ಕಾಯಿಲೆ ಸಮೀಪಿಸುತ್ತಿದ್ದಾಗ ಮಾತ್ರಜನ ಯೋಗಭ್ಯಾಸದಲ್ಲಿ ತೊಡಗಿಸಿಕೊಳ್ಳಲು ಮುಂದಾಗುತ್ತಾರೆ.ಇದು ತಪ್ಪು. ರೋಗಗಳನ್ನುತಡೆಯಲುಯೋಗಬೇಕು. ಇಳಿವಯಸ್ಸಿನಲ್ಲಿ ತಾವು ಆರೋಗ್ಯವನ್ನು ಕಾಪಾಡಿಕೊಳ್ಳಲು ಯೋಗವೇ ಕಾರಣ ಎಂದರು.ನೆದಲ್ಯಾರ್ಂಡ್ ಮೂಲದಯೋಗ ಶಿಕ್ಷಕಿಯೋಗಿನಿ ವೆಂಡಿ ಮ್ಯಾಂಡರ್ಸ್ ಮಾತನಾಡಿ, ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿರುವುದು ನನಗೆ ಹೆಮ್ಮೆಯ ವಿಚಾರ.ಮಾನಸಿಕ ಮತ್ತುದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಧ್ಯಾನ ಮತ್ತು ಯೋಗದಿಂದ ಮಾತ್ರ ಸಾಧ್ಯ ಎಂದರು.ವಿ.ವಿ.ಯ ಪರೀಕ್ಷಾಂಗ ಕುಲಸಚಿವ ಪ್ರೊ.ಕೊಟ್ರೇಶ್ ಎಂ, ಯೋಗವೆಂಬುದು ಹೊಸದೇನಲ್ಲ. ಅದಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ.ಯೋಗವನ್ನು ಪರಿಚಯಿಸಿ ಕೊಟ್ಟಂತಹ ಋಷಿಮುನಿಗಳಿಗೆ ಕೃತಜ್ಞತೆ ಹೇಳಬೇಕು. ವಿದ್ಯಾರಣ್ಯ, ಅಲ್ಲಮಪ್ರಭು ಸಾಧಕರಾದದ್ದು ಯೋಗದಿಂದಲೇ ಎಂದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . SUB EDITOR- A.S.BANUPRAKASH CONTACT : 9901010109 GMAIL: suryapragathi2021@gmail.com.